# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 221 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 24–03–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 221 | RNI No: KARKAN/2023/88462 | KA/SK/CTA-874/2024-2026 | Chitradurga | Date: 24-03-2025 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪುರಸಭೆ ನೂತನ ಕಟ್ಟಡಕ್ಕೆ 5 ಕೋಟಿಗೆ ಪ್ರಸ್ತಾವನೆ ಸಲ್ಲಿಕೆ: ಶಾಸಕ 2

ಏಪ್ರಿಲ್ 16 ಮತ್ತು 17 ರಂದು ಜಿಲ್ಲಾ ಸರ್ಕಾರಿ ನೌಕರರ ವಾರ್ಷಿಕ ಕ್ರೀಡಾಕೂಟ 3

ಜಲಸಂಪನ್ಮೂಲ ಹಾಳು ಮಾಡುವವರ ವಿರುದ್ಧ ಲಾಠಿ ಎತ್ತಿ: ಮಲ್ಲಿಕಾರ್ಜುನಪ್ಪ 4



ಸುದ್ದಿ, ಜಾಹಿರಾತಿಗೆ 9686622252


# ಪಡಿತರಕ್ಕಾಗಿ ಕೂಲಿಬಿಟ್ಟು ಕಾಯುವ ಜನರು

## ನನ್ನಿವಾಳ ನ್ಯಾಯಬೆಲೆ ಅಂಗಡಿ=2ರಲ್ಲಿ ಪಡಿತರಪಡೆಯಲು ಹರಸಾಹಸ ಪಡುತ್ತಿರುವ ಸಾರ್ವಜನಿಕರು

» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ಸರ್ಕಾರ ಪ್ರತಿತಿಂಗಳು ನೀರು ಪಡಿತರ ಅಕ್ಕಿಯನ್ನು 10 ಕೆ.ಜಿಗೆ ನಿಗದಿಪಡಿಸಿ ಈ ಹಿಂದೆ ಐದು ಕೆ.ಜಿ.ಅಕ್ಕಿಗೆ ಹಣ ನೀಡುತ್ತಿದ್ದು, ಈಗ ಹಣದ ಬದಲಿ ಅಕ್ಕಿ ನೀಡುತ್ತಿದೆ. ಅಕ್ಕಿಪಡೆಯಲು ನ್ಯಾಯಬೆಲೆ ಅಂಗಡಿಗಳ ಮುಂದೆ ಜನರು ಬೆಳಗಿನಿಂದ ಸಂಜೆವರೆಗೂ ಕೂಲಿಕೆಲಸ ಬಿಟ್ಟು ನ್ಯಾಯಬೆಲೆ ಅಂಗಡಿ ಬಾಗಿಲಲ್ಲೇ ಕಾಯುವ ಪರಿಸ್ಥಿತಿ ಉಂಟಾಗಿದೆ.

ತಾಲ್ಲೂಕಿನ ನನ್ನಿವಾಳ ಗ್ರಾಮದ ನ್ಯಾಯಬೆಲೆಅಂಗಡಿ–02ರಲ್ಲಿ ಈ ಪರಿಸ್ಥಿತಿ ಪ್ರತಿತಿಂಗಳು ಎದುರಾಗುತ್ತಿದೆ, ಇಲ್ಲಿ ಪಡಿತರ ಪಡೆಯುವವರೆಲ್ಲರೂ ತಾವು ಪ್ರತಿತಿಂಗಳೂ ಪಡುವ ಬವಣೆಯ ಬಗ್ಗೆ ಹೇಳಿಕೊಂಡು ಬೇಸರ ವ್ಯಕ್ತಪಡಿಸುತ್ತಾರೆ. ಒಂದು ದಿನ ಲೇಟಾದರೂ ಪಡಿತರ ಖಾಲಿ ಎನ್ನುತ್ತಾರೆ. ಪ್ರತಿ ಕಾರ್ಡ್‌ಗೆ ಹಣವನ್ನು ಪಡೆಯುತ್ತಾರೆ ಎಂದು ಆರೋಪಿಸುತ್ತಾರೆ, ಹಣ ನೀಡದೇ ಇದ್ದರೆ ಪಡಿತರ ಖಾಲಿ ಮುಂದಿನ ತಿಂಗಳು ಬನ್ನಿ ಎಂದು ಹೇಳುತ್ತಾರೆ. ಈ ಭಾಗದಲ್ಲಿ



ಬುಡಕಟ್ಟು ಸಮುದಾಯದ ಕಡುಬಡವರು, ಕೂಲಿಕಾರರು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಸುತ್ತಮುತ್ತಲ ಸುಮಾರು ಐದಾರು ಕಿ.ಮೀ ದೂರದ ಹಟ್ಟಿಯಿಂದ ಇಲ್ಲಿಗೆ ಬರಬೇಕು, ಯಾವುದೇ ಸಾರಿಗೆ ಸೌಲಭ್ಯವಿಲ್ಲ. ಬೆಳಗಿನಿಂದ ಸಂಜೆತನ ಪಡಿತರಕ್ಕಾಗಿ ಕಾಯುವ ದುಸ್ಥಿತಿ ಉಂಟಾಗಿದೆ. ಸದರಿ ಅಂಗಡಿಯಲ್ಲಿ ಪಡಿತರ ಪಡೆಯುವುದು ದುಸ್ಥಿರವೆಂದು ಈ ಹಿಂದೆ ಆರೋಪಿಸಿದಾಗ ರಾಮಜೋಗಿಹಳ್ಳಿ ನ್ಯಾಯಬೆಲೆ ಅಂಗಡಿಯಿಂದ ಪಡಿತರ ಪಡೆಯಲು ಸೂಚನೆ ನೀಡಿದ್ದರು. ಅಲ್ಲಿ ಯಾವುದೇ ಸಮಸ್ಯೆ ಇಲ್ಲದೆ ಪಡಿತರ ನೀಡುತ್ತಿದ್ದರು. ಆದರೆ, ಮತ್ತೆ ಅದನ್ನು ತಪ್ಪಿಸಿ ಪುನಃ ಇಲ್ಲೇ ಪಡೆಯುವಂತೆ ತಾಲ್ಲೂಕು ಆಡಳಿತ ಮಾಡಿದೆ ಎನ್ನುತ್ತಾರೆ. ನನ್ನಿವಾಳದ ನ್ಯಾಯಬೆಲೆ ಅಂಗಡಿ 2ರಲ್ಲಿ ಪಡಿತರ ವಿತರಣೆ ಬಗ್ಗೆ ಆಗುತ್ತಿರುವ ವಿಳಂಬ ಹಾಗೂ ಸಮಸ್ಯೆಯನ್ನು ನಿವಾರಿಸಲು ಸಂಬಂಧಪಟ್ಟ ಆಹಾರ ಮತ್ತು ನಾಗರೀಕರ ಸರಬರಾಜು ಇಲಾಖೆ ಅಧಿಕಾರಿಗಳು ಕ್ರಮವಹಿಸಬೇಕಿದೆ. ತಹಶೀಲ್ದಾರ್ ಸಹ ಈ ನಿಟ್ಟಿನಲ್ಲಿ ಈ ಭಾಗದ ಜನರ ಸಮಸ್ಯೆಗೆ ಪರಿಹಾರ ನೀಡಬೇಕಿದೆ. ಪ್ರತಿತಿಂಗಳು ದಿನಗಟ್ಟಲೇ ಪಡಿತರಕ್ಕಾಗಿ ಕಾದ ಸಂದರ್ಭದಲ್ಲಿ ನ್ಯಾಯಬೆಲೆ ಅಂಗಡಿ ಬಾಗಿಲು ತೆರೆದಾಗ ಜನರು ನಾಮುಂದು, ತಾಮುಂದು ಎಂದು ಮುಗಿಬಿಳುತ್ತಾರೆ. ಇದರಿಂದ ಪಡಿತರ ಪಡೆಯಲು ಸಾಹಸ ಪಡಬೇಕಿದೆ. ಆದ್ದರಿಂದ ತಾಲ್ಲೂಕು ಆಡಳಿತ ಕಡೆಪಕ್ಷ ಹೆಚ್ಚುವರಿಯಾಗಿ ನ್ಯಾಯಬೆಲೆ ಅಂಗಡಿ ತೆರೆಯುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ರಂಜಾನ್: ಉಪವಾಸ ನಿರತ ಮುಸ್ಲಿಂ ಬಂಧುಗಳಿಗೆ ಶಾಸಕ ಟಿ.ರಘುಮೂರ್ತಿಯಿಂದ ಇಫ್ತಿಯಾರ್ ಕೂಟ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಉಪವಾಸ ನಿರತ ಮುಸ್ಲಿಂ ಬಂಧುಗಳಿಗಾಗಿ ಇಫ್ತಿಯಾರ ಕೂಟವನ್ನು ನಗರದ ಜಾಮೀಯ ಮಸೀದಿಯಲ್ಲಿ ಭಾನುವಾರ ಸಂಜೆ ಹಮ್ಮಿಕೊಂಡಿದ್ದರು.

ಪ್ರಾರಂಭದಲ್ಲಿ ಕಾಂಗ್ರೆಸ್ ಪಕ್ಷದ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ, ನಿವೃತ್ತ ಶಿಕ್ಷಕ, ನಗರಸಭೆ ನಾಮಿನಿ ಸದಸ್ಯ ಅನ್ವರ್‌ಮಾಸ್ಟರ್ ಸ್ವಾಗತಕೋರಿ ಮಾತನಾಡಿ, ಕ್ಷೇತ್ರದ ಶಾಸಕ ಕಳೆದ ಹಲವಾರು ವರ್ಷಗಳಿಂದ ಸಮುದಾಯದ ಬಂಧುಗಳಿಗೆ ಇಫ್ತಿಯಾರಕೂಟವನ್ನು ಏರ್ಪಡಿಸುವ ಮೂಲಕ ತಮ್ಮ ಕರ್ತವ್ಯವನ್ನು ನೆರವೇರಿಸಿದ್ದಾರೆ. ಪ್ರತಿವರ್ಷವೂ ಈ ಕಾರ್ಯಕ್ರಮವನ್ನು ತಪ್ಪದೆ ಮಾಡುತ್ತಾ ಬಂದಿದ್ದಾರೆ, ವಿಶೇಷವಾಗಿ ಇತ್ತೀಚಿಗಷ್ಟೇ ಈದ್ಗಾ ಮೈದಾನದ ಆವರಣದಲ್ಲಿ ಲಕ್ಷಾಂತರ ವೆಚ್ಚದಲ್ಲಿ ಸ್ಲಾಬ್ ನಿರ್ಮಿಸಿಕೊಟ್ಟಿದ್ದಾರೆ. ಸಮುದಾಯದ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು.



ಕ್ಷೇತ್ರ ಶಾಸಕ, ಸಣ್ಣಕೈಗಾರಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ಚಳ್ಳಕೆರೆ ನಗರದವೂ ಸೇರಿದಂತೆ ಕ್ಷೇತ್ರದ ವಿವಿಧ ಗ್ರಾಮಗಳ ಮಸೀದಿಗಳಲ್ಲಿ ಇಫ್ತಿಯಾರ ಕೂಟ ಹಮ್ಮಿಕೊಂಡು ಉಪವಾಸ ನಿರತ ಮುಸ್ಲಿಂ ಬಂಧುಗಳಿಗೆ ರಂಜಾನ್ ಹಬ್ಬದ ಶುಭಾಶಯ ಕೋರಿದ್ದೇನೆ. ಎಲ್ಲರೂ ಎಲ್ಲರೊಂದಿಗೂ ಉತ್ತಮ ಬಾಂಧವ್ಯವನ್ನು ಹಮ್ಮಿಕೊಂಡು ಜೀವನವನ್ನು ನಡೆಸಬೇಕಿದೆ. ವಿಶೇಷವಾಗಿ ಈ ಕ್ಷೇತ್ರದ ಮುಸ್ಲಿಂ ಬಂಧುಗಳು ಶಾಂತಿ, ಸೌಹಾರ್ದತೆಗೆ ಹೆಸರಾದವರು ಎಂದರು.

ಕಾರ್ಯಕ್ರಮದಲ್ಲಿ ಮುಸ್ಲಿಂ ಸಮುದಾಯದ ಬಂಧುಗಳಾದ ಎಚ್.ಎಸ್.ಸೈಯದ್, ಸಲೀಂ, ಜುಬೇರ್, ನಗರಸಭೆ ನಾಮಿನಿ ಸದಸ್ಯರಾದ ಬಡಗಿಪಾಪಣ್ಣ, ಆರ್.ವೀರಭದ್ರಪ್ಪ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ ಮುಂತಾದವರು ಉಪಸ್ಥಿತರಿದ್ದರು.

## ನಿವೃತ್ತ ಡಿಎಫ್‌ಒ ಓ.ರಾಜಣ್ಣ ಚಳ್ಳಕೆರೆ ಮನೆ ಮೇಲೆ ಲೋಕಾಯುಕ್ತ ದಾಳಿ



» **ಚಳ್ಳಕೆರೆ**

ಕಳೆದ ಫೆ.28ರಂದು ನಿವೃತ್ತರಾದ ಚಿತ್ರದುರ್ಗ ಜಿಲ್ಲಾ ಡಿಎಫ್‌ಒ ಓ.ರಾಜಣ್ಣರ ಮನೆಗೆ ಲೋಕಾಯುಕ್ತ ಅಧಿಕಾರಿಗಳು ಶನಿವಾರ ಬೆಳ್ಳಂಬೆಳಗ್ಗೆ ದಾಳಿ ನಡೆಸಿ ಶಾಕ್ ನೀಡಿದ್ದಾರೆ. ಇತ್ತೀಚೆಗೆ ನಡೆದ ಲೋಕಾಯುಕ್ತ ದಾಳಿಯಲ್ಲಿ ಬೆಂಗಳೂರಿನ ಅರಣ್ಯ ಇಲಾಖೆ ನೌಕರರ ಗೋಪಾಲ್ ಎಂಬುವವರ ಬಳಿ ಪತ್ತೆಯಾದ ಸುಮಾರು 45 ಲಕ್ಷ ಹಣ ಡಿಎಫ್‌ಒ ರಾಜಣ್ಣನವರಿಗೆ ಸೇರಿದ್ದು ಎಂದು ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ಲೋಕಾಯುಕ್ತ ಡಿವೈಎಸ್ಪಿ ಮೃತ್ಯುಂಜಯ ತಂಡ ದಾಳಿ ನಡೆಸಿ ಪರಿಶೀಲನೆ ನಡೆಸಿತು. ಡಿಎಫ್‌ಒ ರಾಜಣ್ಣ ಸೇವೆಯಿಂದ ನಿವೃತ್ತಿನಂತರ ಚಿತ್ರದುರ್ಗದಲ್ಲಿ ವಾಸವಿದ್ದು, ಚಳ್ಳಕೆರೆ ನಗರದ ವಾಲ್ಮೀಕಿ ನಗರದ ಬಂಡೆಆಂಜನೇಯಸ್ವಾಮಿ ದೇವಸ್ಥಾನದ ಬಳಿ ನೂತನ ಮನೆ ನಿರ್ಮಿಸಿದ್ದು ಅಲ್ಲಿಗೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ.

## ಪ್ರಮುಖ ಸುದ್ದಿ

### ಕಾರೇಹಳ್ಳಿ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸದ್ಗುರು ಪ್ರದೀಪ್ ಅಭಿಮತ

# ಬರೀ ಮಾತನಾಡುವ ತುಟಿಗಳಿಗಿಂತ, ಸೇವೆ ಮಾಡುವ ಕೈಗಳೇ ಶ್ರೇಷ್ಠ

» **ಹೊಸದುರ್ಗ**

ಧರ್ಮಸ್ಥಳದ ವೀರೇಂದ್ರ ಹೆಗ್ಗಡೆಯವರು ಬರಿ ಮಾತನಾಡದೆ, ಕನ್ನಡ ನಾಡಿನ ಜನರಿಗೆ ಸೇವೆ ಮಾಡುವುದರ ಮುಖಾಂತರ ಇತಿಹಾಸದ ಪುಟಗಳಲ್ಲಿ ಸೇರಿದ್ದಾರೆ. ಹಳ್ಳಿಯ ಸಾಹುಕಾರರ ಹತ್ತಿರ ಸಾಲ ಪಡೆದು ಬಡ್ಡಿ ಕಟ್ಟಲಾಗದೆ, ನರಕ ಯಾತನೆ ಅನುಭವಿಸುತ್ತಿದ್ದ ಮಹಿಳೆಯರಿಗೆ ಬ್ಯಾಂಕ್ ಆಫ್ ಬರೋಡದಿಂದ ಧರ್ಮಸ್ಥಳ ಸಂಸ್ಥೆಯವರು ಕೊಡಿಸುತ್ತಿರುವ ಸಾಲದಿಂದ ಅವಲಂಬಿಗಳಾಗಿ ಮಹಿಳೆಯರು ಬದುಕುತ್ತಿದ್ದಾರೆ. ಬರೀ ಮಾತನಾಡುವ ತುಟಿಗಳಿಗಿಂತ, ಸೇವೆ ಮಾಡುವ ಕೈಗಳೆ ಶ್ರೇಷ್ಠ ಎಂದು ಸದ್ಗುರು ಆಯುರ್ವೇದ ಸಂಸ್ಥೆಯ ಮಾಲೀಕ ಡಿ.ಎಸ್.ಪ್ರದೀಪ್ ಅಭಿಮತ ವ್ಯಕ್ತಪಡಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ, ಕಾರೆಹಳ್ಳಿ ಹಾಗೂ ಬೆಲಗೂರು ಒಕ್ಕೂಟಗಳ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಮೊದಲ ಶಕ್ತಿ ಮಾನವ ಸಂಪನ್ಮೂಲ. ಇತ್ತೀಚಿನ ದಿನಮಾನಗಳಲ್ಲಿ ಪುರುಷರಿಗಿಂತ ಮಹಿಳೆಯರೇ ಆರ್ಥಿಕ ಉಳಿತಾಯಕ್ಕೆ ಸಹಕಾರಿಯಾಗಿದ್ದಾರೆ. ಮಹಿಳೆಯರ ಆರ್ಥಿಕ ಸಹಾಯಕ್ಕೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಆಸರೆಯಾಗಿದೆ.



ನಮ್ಮ ಆರ್ಥಿಕ ಪ್ರಗತಿ ನಿರಂತರವಾದರೆ, ದೇಶ ಅಭಿವೃದ್ಧಿಯಾಗಬಲ್ಲದು. ಧರ್ಮಸ್ಥಳ ರೋಡ್ ಸೈಡ್ ಸಂಸ್ಥೆ ತರಬೇತಿಯ ತರುವಾಯ, ನನ್ನ ಆರ್ಥಿಕ ಪ್ರಗತಿಯನ್ನೇ ಬದಲಾಯಿಸಿ ಉತ್ತುಂಗ ಮಟ್ಟಕ್ಕೆ ಹೋಗಲು ಕಾರಣವಾಯಿತು. ತರಬೇತಿಗೆ ಪ್ರಾಮಾಣಿಕತೆ ಇದ್ದರೆ, ಎಲ್ಲಾ ವಲಯದಲ್ಲಿಯೂ ಮುಂದೆ ಬರಬಹುದು. ಒಂದು ಕುಟುಂಬದ ಒಬ್ಬ ಮಹಿಳೆ ಸದೃಢವಾದರೂ, ಕುಟುಂಬ ಮತ್ತು ದೇಶ ಸದೃಢವಾದಂತೆ. ನಿಮ್ಮ ಮುಂದಿನ ಜೀವನವನ್ನು ಬದಲಾವಣೆ ಮಾಡುವ ಏಕೈಕ ಸಾಧನವೇ ಶಿಕ್ಷಣ. ನಿಮ್ಮ ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ಕೊಡಿಸಿ ಕುಟುಂಬದ ನೆಮ್ಮದಿಯ ಬದುಕಿಗೆ ಸಹಕರಿಸಿ ಸಲಹೆ ನೀಡಿದರು.ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷೆ ವಿಶಾಲಾಕ್ಷಿ ನಟರಾಜ್ ಮಾತನಾಡಿ, ಶಿಸ್ತು, ಸಂಯಮ ಮತ್ತು ಸಮಯಕ್ಕೆ ಧರ್ಮಸ್ಥಳ ಸಂಸ್ಥೆ ಹೆಸರಾಗಿದೆ. ಮಧುರೆಯ ಧರ್ಮಸ್ಥಳ ಸಂಸ್ಥೆಯ ಶುಭ ಸಂಘದಲ್ಲಿ 10.ಲಕ್ಷ ಸಾಲ ಪಡೆದು ಬೋರ್ವೆಲ್ ಕೊರೆಯಿಸಿ, ಅಡಕೆ ತೋಟ ಮಾಡಿದ್ದೇನೆ. ಇದರಿಂದಾಗಿ ನಮ್ಮ ಕುಟುಂಬದವರು ಆರ್ಥಿಕವಾಗಿ ಸ್ವಾವಲಂಬಿಯಾಗಿದ್ದೇವೆ. ನನ್ನ ಸ್ವಾವಲಂಬಿ ಬದುಕು ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ತಲುಪಿಸಿದೆ. ಧರ್ಮಸ್ಥಳ ಸಂಸ್ಥೆಯವರು ನೀಡುತ್ತಿರುವ ಸುಜ್ಞಾನನಿಧಿಯಿಂದ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಪಡೆದು ಶಿಕ್ಷಣದಲ್ಲಿ ಮುಂದೆ ಬಂದಿದ್ದಾರೆ. ನಿಮ್ಮ ಮಕ್ಕಳಿಗೆ ವಿದ್ಯೆಯ ಜೊತೆಗೆ ಬದುಕಿನ ಮೌಲ್ಯಯುತ ಸಂಸ್ಕಾರವನ್ನು ತಾಯಂದಿರು ಕೊಡಬೇಕು ಎಂದರು. ಇದೇ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ಕೆ.ಡಿ.ಪಿ ಸದಸ್ಯೆ ದೀಪಿಕಾ ಸತೀಶ್, ಯೋಜನಾಧಿಕಾರಿ ಶಿವಣ್ಣ, ಸೇವಾ ಪ್ರತಿನಿಧಿಗಳಾದ ಶಿಲ್ಪಾ, ಭವ್ಯ ಹಾಗೂ ಬೆಲಗೂರು ಮತ್ತು ಕಾರೆಹಳ್ಳಿ ವಲಯದ ಪ್ರಗತಿ ಬಂಧು ಸ್ವ–ಸಹಾಯ ಸಂಘಗಳ ಒಕ್ಕೂಟದ ಸದಸ್ಯರು ಹಾಜರಿದ್ದರು.

> ಪ್ರತಿಯೊಬ್ಬ ವ್ಯಕ್ತಿಯಲ್ಲಿಯೂ ಸಹ ಅವರದೇ ಆದ ಸಾಮರ್ಥ್ಯವಿರುತ್ತದೆ. ಒಬ್ಬ ಕುರೂಪಿಯಲ್ಲಿಯೂ ಒಂದು ಸೌಂದರ್ಯವಿರುತ್ತದೆ. ಇದು ದೇವರ ನಿಯಮವೂ ಕೂಡ ಆಗಿದೆ. ನಿಮ್ಮ ಜ್ಞಾನಕ್ಕೆ ಮೆರಗನ್ನ ನೀಡುವಂತಹ ತರಬೇತಿಯನ್ನ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ನೀಡುತ್ತಿದೆ. ಆರ್ಥಿಕ ಹಾಗೂ ಸಾಮಾಜಿಕವಾಗಿ ಮಹಿಳೆಯರನ್ನ ಸಬಲೀಕರಣಗೊಳಿಸಿ, ಗ್ರಾಮಗಳನ್ನು ಅಭಿವೃದ್ಧಿಪಡಿಸುವುದೇ ಧರ್ಮಸ್ಥಳ ಸಂಸ್ಥೆಯ ಮೂಲ ಉದ್ದೇಶ. ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮತ್ತು ಅವಹೇಳನಕಾರಿ ಹೇಳಿಕೆಗಳು ಅಂತವರಿಗೆ ಶೋಭೆ ತರುವುದಿಲ್ಲ.
>
> » **ತುಂಬಿನಕೆರೆ ಬಸವರಾಜ್ ಚಿತ್ರದುರ್ಗ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ.**

## ಫಾಸ್ಟ್ ನ್ಯೂಸ್

### ಬಂದ್‌ಗೆ ಚಳ್ಳಕೆರೆಯಲ್ಲಿ ನೀರಸ ಪ್ರತಿಕ್ರಿಯೆ



» **ಚಳ್ಳಕೆರೆ**

ಕನ್ನಡಪರ ಸಂಘಟನೆ ಹಿರಿಯ ನೇತಾರ ವಾಟಾಳ್‌ನಾಗರಾಜು ಎಂಇಎಸ್ ಪುಂಡರ ವಿರುದ್ಧ ಮಾ.22ರಂದು ಕರ್ನಾಟಕ ಬಂದ್ ಕರೆ ನೀಡಿದ್ದು ಚಳ್ಳಕೆರೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಂದ್ ಹಿನ್ನೆಲೆಯಲ್ಲಿ ಯಾವುದೇ ಕನ್ನಡಪರ ಸಂಘಟನೆಗಳು ಸಾರ್ವಜನಿಕರವಾಗಿ ಯಾವುದೇ ಮಾಹಿತಿ ನೀಡದ ಹಿನ್ನೆಲೆಯಲ್ಲಿ ಸಾರ್ವಜನಿಕರು ಬಂದ್ ಮಾಡದೆ ತಮ್ಮ ವ್ಯವಹಾರದಲ್ಲಿ ನಿರತರಾದರು. ಎಂದಿನಂತೆ ಬಸ್, ಲಾರಿ, ಆಟೋ ಚಲಿಸಿದವು. ಎಲ್ಲಾ ಅಂಗಡಿ, ಹೋಟೆಲ್ ತೆರೆದಿದ್ದವು. ಪೋಲೀಸರ ಮಾತ್ರ ಬೆಳಗಿನಿಂದಲೇ ನಗರದ ಎಲ್ಲಾ ಪ್ರಮುಖ ರಸ್ತೆಯಲ್ಲಿ ಬಂದೋಬಸ್ತ್ ಏರ್ಪಡಿಸಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಎಚ್ಚರಿಕೆ ವಹಿಸಿದರು. ಯಾವುದೇ ಮನವಿಯನ್ನು ಸಹ ಯಾವ ಸಂಘಟನೆಯೂ ತಾಲ್ಲೂಕು ಆಡಳಿತಕ್ಕೆ ನೀಡಲಿಲ್ಲ.

### ಕರ್ನಾಟಕ ಕ್ರೀಡಾ ಪ್ರಾಧಿಕಾರ: ಫಿಟ್ನೆಸ್ ತರಬೇತುದಾರರಿಂದ ಅರ್ಜಿ ಆಹ್ವಾನ

» **ದಾವಣಗೆರೆ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ 14 ಹಿರಿಯ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳಿಗೆ ಫಿಟ್ನೆಸ್ ತರಬೇತಿ ನೀಡುವ ಸಲುವಾಗಿ 14 ಫಿಟ್ನೆಸ್ ತರಬೇತುದಾರರ ಸೇವೆ ಪಡೆಯಲು ಒಂದು ವರ್ಷದ ತಾತ್ಕಾಲಿಕ ಅವಧಿಯವರೆಗೆ ಮಾಸಿಕ ಸಂಚಿತ ವೇತನ, ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಏಪ್ರಿಲ್ 15 ರ ಸಂಜೆ 4.00 ಗಂಟೆಯೊಳಗೆ ನೃಪತುಂಗ ರಸ್ತೆ, ರಾಜ್ಯ ಯುವ ಕೇಂದ್ರ, ಕರ್ನಾಟಕ ಕ್ರೀಡಾ ಪ್ರಾಧಿಕಾರ ಮಹಾ ನಿರ್ದೇಶಕರು, ಬೆಂಗಳೂರು ಇವರಿಗೆ ಸಲ್ಲಿಸಬೇಕು. ಅರ್ಜಿ ನಮೂನೆ ಮತ್ತು ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವೆಬ್‌ಸೈಟ್ dyes.karnataka.gov.in ನಲ್ಲಿ ಪಡೆಯಬಹುದು.

**ಅರ್ಹತಾ ಮಾನದಂಡಗಳು:** ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಕ್ರೀಡಾ, ವಿಜ್ಞಾನದೊಂದಿಗೆ ಯಾವುದೇ ವಿಷಯದಲ್ಲಿ ಪದವಿ. ಕ್ರೀಡೆ ಮತ್ತು ವ್ಯಾಯಾಮ ವಿಜ್ಞಾನ, ಕ್ರೀಡಾ ತರಬೇತಿ, ಕ್ರೀಡಾ ವಿಜ್ಞಾನ ಹಾಗೂ ದೈಹಿಕ ಶಿಕ್ಷಣದಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು. ಎಖಅಂ–ಮಟ್ಟ 1, ಮಟ್ಟ–02, ಮಟ್ಟ–03 ಕೋರ್ಸ್‌ಗಳೊಂದಿಗೆ, ಓ.ಖ.ಖ. ನಿಂದ ಸಾಮರ್ಥ್ಯ ಮತ್ತು ಕಂಡೀಷನಿಂಗ್‌ನಲ್ಲಿ ಒಂದು ವರ್ಷದ ಡಿಪ್ಲೊಮಾ ಪದವಿ ಪಡೆದಿರಬೇಕು. ಫಿಟ್‌ನೆಸ್ ತರಬೇತಿಯಲ್ಲಿ ಡಿಪ್ಲೊಮಾದೊಂದಿಗೆ ಯಾವುದೇ ವಿಷಯದಲ್ಲಿ ಪದವಿ ಹೊಂದಿರಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನೀರಿನ ಸಮಸ್ಯೆಗೆ ಸಹಾಯವಾಣಿ ಆರಂಭ

» **ದಾವಣಗೆರೆ**

ಬೇಸಿಗೆ ಹಿನ್ನೆಲೆ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಲ್ಲಿ ಸಾರ್ವಜನಿಕರು ದಾವಣಗೆರೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ದೂರವಾಣಿ ಸಂಖ್ಯೆ: 08192–262126, ದಾವಣಗೆರೆ ಉಪವಿಭಾಗ: 08192–262120, ಹರಿಹರ : 08192–242352, ಚನ್ನಗಿರಿ: 08189–295071, ಹೊನ್ನಾಳಿ: 08188–252571, ಜಗಳೂರು: 08196–227707 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಸುರೇಶ್ ಬಿ ಇಟ್ನಾಳ್ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಆದರ್ಶ ವಿದ್ಯಾಲಯದ 6ನೇ ತರಗತಿ ಪ್ರವೇಶ ಪರೀಕ್ಷೆ : 61 ವಿದ್ಯಾರ್ಥಿಗಳು ಗೈರು, 723 ಹಾಜರು



» **ಚಳ್ಳಕೆರೆ**

ನಗರದ ಆದರ್ಶ ವಿದ್ಯಾಲಯದ 6ನೇ ತರಗತಿ ಪ್ರವೇಶ ಪಡೆಯಲು ಭಾನುವಾರ ಪರೀಕ್ಷೆಗಳನ್ನು ಏರ್ಪಡಿಸಿದ್ದು, ಒಟ್ಟು 784 ವಿದ್ಯಾರ್ಥಿಗಳು ಪ್ರವೇಶ ಪಡೆಯಲು ನಗರದ ಮೂರು ಕೇಂದ್ರಗಳಲ್ಲಿ ಪರೀಕ್ಷೆ ಬರೆದಿದ್ದಾರೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಪರೀಕ್ಷೆಯ ಮೇಲುಸ್ತುವಾರಿ ಅಧಿಕಾರಿ ಕೆ.ಎಸ್.ಸುರೇಶ್ ನಗರದ ಬಿಎಂಜಿಎಚ್‌ಎಸ್ ಸರ್ಕಾರಿ ಪ್ರೌಢಶಾಲೆ, ಮೊರಾರ್ಜಿ ದೇಸಾಯಿ ವಸತಿ ಶಾಲೆ, ಆದರ್ಶ ವಿದ್ಯಾಲಯ ಮೂರು ಕೇಂದ್ರಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿತ್ತು, ಬಿಎಂಜಿಎಚ್‌ಎಸ್ ಸರ್ಕಾರಿ ಪ್ರೌಢಶಾಲೆಯಲ್ಲಿ 264, ಮೊರಾರ್ಜಿ ದೇಸಾಯಿ ವಸತಿ ಶಾಲೆ–240 ಆದರ್ಶ ವಿದ್ಯಾಲಯ–280 ವಿದ್ಯಾರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದು, 61 ವಿದ್ಯಾರ್ಥಿಗಳು ಗೈರಾಗಿದ್ದು, 723 ವಿದ್ಯಾರ್ಥಿಗಳು ಪರೀಕ್ಷೆ ಹಾಜರಾಗಿದ್ದಾರೆ. ಪರೀಕ್ಷೆ ಬೆಳಗ್ಗೆ 10.30ರಿಂದ1ರ ತನಕ ಪರೀಕ್ಷೆಗಳು ನಡೆದವು. ಆದರ್ಶ ಶಾಲೆ ಮುಖ್ಯ ಅಧೀಕ್ಷಕ ದೇವಾನಂದಭಂಡಾರಿ, ಶಿಕ್ಷಣ ಸಂಯೋಜಕ ಮಾರುತಿಭಂಡಾರಿ ಓಂಕಾರಪ್ಪ, ವೀರೇಶ್ ಮುಂತಾದವರು ಉಪಸ್ಥಿತರಿದ್ದರು.

### ಇನ್ಸೂರೆನ್ಸ್ ಮತ್ತು ಪರವಾನಿಗೆ ಕಡ್ಡಾಯವಾಗಿರಬೇಕು: ಆಟೋ ಚಾಲಕರಿಗೆ ಪಿ.ಐ ರಮೇಶ್ ಸೂಚನೆ



» **ಹೊಸದುರ್ಗ**

ಮಾನವ ಜನ್ಮ ಅಮೂಲ್ಯವಾದದ್ದು. ಪ್ರಯಾಣಿಕರ ವಾಹನ ಚಲಾಯಿಸುವವರು ತುಂಬಾ ಜವಾಬ್ದಾರಿಯಿಂದ ವಾಹನ ಚಲಾಯಿಸಬೇಕು. ನಿಮ್ಮನ್ನು ನಂಬಿದ ನಿಮ್ಮ ಹೆಂಡತಿ, ಮಕ್ಕಳು ನಿಮ್ಮಿಂದಲೇ ಬದುಕುತ್ತಿರುತ್ತಾರೆ. ನಿಮ್ಮ ಆಟೋದಲ್ಲಿ ಕೂರುವ ಪ್ರಯಾಣಿಕರನ್ನ ಜವಾಬ್ದಾರಿಯಿಂದ ಅವರ ಮನೆಗೆ ತಲುಪಿಸಬೇಕು. ಆಟೋ ಚಾಲಕರು ನಗರದಾದ್ಯಂತ ಅಡ್ಡ–ದಿಡ್ಡಿ ಓಡಾಡುವುದು ಗಮನಕ್ಕೆ ಬಂದಿದ್ದು, ಯಾವುದೇ ಕಾರಣಕ್ಕೂ ಸಾರಿಗೆ ನಿಯಮವನ್ನು ಪಾಲಿಸಿ, ಆಟೋ ಚಲಾಯಿಸಬೇಕು. ಇಲ್ಲದಿದ್ದರೆ, ಅಂತಹವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುತ್ತೇವೆ ಎಂದು ಹೊಸದುರ್ಗ ಪೊಲೀಸ್ ಇನ್ಸ್ಪೆಕ್ಟರ್ ರಮೇಶ್ ಖಡಕ್ ಸೂಚನೆ ನೀಡಿದರು. ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ಶನಿವಾರ ಆಯೋಜಿಸಿದ್ದ ಆಟೋ ಚಾಲಕ ಮತ್ತು ಮಾಲೀಕರ ಸಭೆಯಲ್ಲಿ ಮಾತನಾಡಿದ ಅವರು, ಸಾರ್ವಜನಿಕರು ಕೂರುವ ಆಟೋಗಳಲ್ಲಿ ವಾಹನ ಚಾಲಕರು ಅವರಿಗೆ ಇಷ್ಟ ಬಂದ ರೀತಿಯಲ್ಲಿ ಆಟೋವನ್ನು ನವೀಕರಿಸಿ ಓಡಾಡುತ್ತಿದ್ದಾರೆ. ಕಂಪನಿಯಿಂದ ಬಂದ ಆಟೋದ ರೀತಿಯಲ್ಲಿಯೇ ಇರಬೇಕು. ಇಲ್ಲದಿದ್ದರೆ, ತಕ್ಷಣವೇ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ನಗರದಲ್ಲಿ ವಾಹನ ದಟ್ಟಣೆ ಹೆಚ್ಚಾಗಿದ್ದು, ರಸ್ತೆಗಳಲ್ಲಿ ಎಲ್ಲೆಂದರಲ್ಲಿ ವಾಹನಗಳನ್ನ ನಿಲ್ಲಿಸಿ ಹೋಗುತ್ತಿದ್ದು, ಇದರಿಂದ ವಾಹನ ಸಂಚಾರಕ್ಕೆ ತೊಂದರೆ ಉಂಟಾಗುತ್ತದೆ. ದ್ವಿಚಕ್ರ ವಾಹನ ಸವಾರರು, ಸಂಚಾರಿ ಸಾರಿಗೆ ಕಾಯಿದೆ ಮೀರಿ ವಾಹನ ಚಲಾಯಿಸಿದರೆ, ಅದಕ್ಕೆ ತಕ್ಕ ದಂಡ ತೆರಬೇಕಾಗುತ್ತದೆ. ಹೊಸದುರ್ಗ ನಗರದಲ್ಲಿ ವಾಹನ ದಟ್ಟಣೆ ಹೆಚ್ಚಿರುವುದರಿಂದ ದ್ವಿಚಕ್ರ ವಾಹನ ಸವಾರರು ಎಲ್ಲೆಂದರಲ್ಲಿ ತಮ್ಮ ವಾಹನಗಳನ್ನು ನಿಲ್ಲಿಸಬಾರದು. ಎಂದರು. ಈ ವೇಳೆ ಕಾರ್ಯಕ್ರಮದಲ್ಲಿ ಪೊಲೀಸ್ ಸಿಬ್ಬಂದಿಗಳಾದ ಮಂಜುನಾಥ್ ಮತ್ತು ಸತ್ಯನಾರಾಯಣ್ ಸೇರಿದಂತೆ ಆಟೋ ಚಾಲಕ ಹಾಗೂ ಮಾಲೀಕರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.

### ರಾಷ್ಟ್ರೀಯ, ಅಂತರಾಷ್ಟ್ರೀಯ ಯೋಗ ಪ್ರಶಸ್ತಿ: ಅರ್ಜಿ

» **ದಾವಣಗೆರೆ**

ಪ್ರಧಾನ ಮಂತ್ರಿ ರಾಷ್ಟ್ರೀಯ, ಅಂತರಾಷ್ಟ್ರೀಯ ಮಟ್ಟದ ಅತ್ಯುನ್ನತ ಯೋಗ ಪ್ರಶಸ್ತಿಯನ್ನು ಘೋಷಿಸಲಾಗಿದ್ದು, ಈ ಸಂಬಂಧ ಯೋಗ ಕ್ರೀಡೆಗೆ ಅತ್ಯುನ್ನತವಾದ ಕೊಡುಗೆ ನೀಡಿರುವಂತಹ ಕ್ರೀಡಾಪಟುಗಳು ಅಥವಾ ಯೋಗ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ವಿಶ್ವ ಜಲ ದಿನದ ಪ್ರಯುಕ್ತ ಪರಿಸರ ಜಾಥಾದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್ ಸಲಹೆ**

# ಜಲಮೂಲ ಸಂರಕ್ಷಣೆಗೆ ಮುಂದಾಗಿ

» **ಚಿತ್ರದುರ್ಗ**

ಜಲಮೂಲ ಸಂರಕ್ಷಣೆಗೆ ಪ್ರತಿಯೊಬ್ಬರು ಮುಂದಾಗಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಒನಕೆ ಓಬವ್ವ ವೃತ್ತದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ, ನೆಹರು ಯುವ ಕೇಂದ್ರ ಹಾಗೂ ನಗರಸಭೆ ಸಹಯೋಗದಲ್ಲಿ ವಿಶ್ವ ಜಲ ದಿನ–2025ರ ಘೋಷವಾಕ್ಯ ಹಿಮನದಿ ಸಂರಕ್ಷಣೆ ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ್ದ ಪರಿಸರ ಜಾಥಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶುದ್ಧ ಕುಡಿಯುವ ನೀರು ಮನುಷ್ಯನ ಮೂಲಭೂತ ಹಕ್ಕು ಎಂದು ಸುಪ್ರೀಂ ಕೋರ್ಟ್ ಕೂಡ ಇತ್ತೀಚೆಗೆ ತೀರ್ಮಾನ ಮಾಡಿದೆ. ನೀರಿನ ಮೂಲಗಳನ್ನು ರಕ್ಷಣೆ ಮಾಡಬೇಕು, ಜಲ ಮೂಲಗಳ ಸಂರಕ್ಷಣೆ ಕುರಿತು ವಿವಿಧ ಇಲಾಖೆಗಳ ಸಹಯೋಗದಲ್ಲಿ ಸಮಿತಿಗಳನ್ನು ರಚಿಸಲಾಗಿದೆ.

ಮುಂದಿನ ಪೀಳಿಗೆಗೆ ನೀರನ್ನು ಸಂರಕ್ಷಣೆ ಮಾಡುವುದು ಹಾಗೂ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಒದಗಿಸುವುದು ಈ ಸಮಿತಿಗಳ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದ ಅವರು, ಯುವ



ಪೀಳಿಗೆಗೆ ಈ ಬಗ್ಗೆ ಅರಿವು ಮತ್ತು ಜಾಗೃತಿ ಮೂಡಿಸುವ ಸಲುವಾಗಿ ಈ ರೀತಿಯ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದರು.

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಆಸಿಫ್‌ಖಾನ್ ಮಾತನಾಡಿ, ಜಾಗತಿಕ ತಾಪಮಾನದಿಂದ ಹಿಮಾಲಯದಲ್ಲಿ ಹಿಮನದಿಗಳು ಹರಿಯುತ್ತಿವೆ, ಜಲ ಮೂಲಗಳು ಬತ್ತಿಹೋಗುತ್ತಿವೆ. ಈ ಕಾರಣದಿಂದ ಜಾಗತಿಕವಾಗಿ ಜಲ ಮೂಲಗಳ ಸಂರಕ್ಷಣೆಗಾಗಿ ಶ್ರಮಿಸಲಾಗುತ್ತಿದೆ. ಇದಕ್ಕೆ ನಾವೆಲ್ಲರೂ ಕೈಜೋಡಿಸಬೇಕಿದೆ ಎಂದು ತಿಳಿಸಿದರು.

ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಡಾ.ಎಂ.ಜೆ.ಮಹೇಶ್ ಮಾತನಾಡಿ, ವಿಶ್ವ ಜಲ ದಿನವನ್ನು ವರ್ಷಕ್ಕೊಮ್ಮೆ ಮಾತ್ರ ಆಚರಿಸುವುದಲ್ಲ, ನಮ್ಮಗಳ ವೃತ್ತಿ ಜೀವನದಲ್ಲಿ ಅಳವಡಿಸಿಕೊಂಡು ಪ್ರತಿ ದಿನವೂ ಆಚರಿಸುವಂತಾಗಬೇಕು. ನೀರು ಹಾಗೂ ಜಲ ಮೂಲಗಳ ಸಂರಕ್ಷಣೆ ಬಗ್ಗೆ ವಿದ್ಯಾರ್ಥಿಗಳು, ಯುವ ಸಮೂಹಕ್ಕೆ ಹೆಚ್ಚು ಹೆಚ್ಚು ಅರಿವು ಮತ್ತು ಜಾಗೃತಿ ಮೂಡಿಸಬೇಕಾದ ಅವಶ್ಯಕತೆ ಇದೆ ಎಂದು ಹೇಳಿದರು.

ಪರಿಸರ ಜಾಥಾಕ್ಕೆ ಚಾಲನೆ: ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇಗುಲದ ಮುಂಭಾಗದಲ್ಲಿ ವಿಶ್ವ ಜಲ ದಿನ–2025ರ ಪರಿಸರ ಜಾಥಾ ಕಾರ್ಯಕ್ರಮಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್ ಹಾಗೂ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಗರದ ನೀಲಕಂಠೇಶ್ವರಸ್ವಾಮಿ ದೇವಸ್ಥಾನದ ಮುಂಭಾಗದಿಂದ ಹೊರಟ ಜಾಥಾ ಗಾಂಧಿ ವೃತ್ತ, ಬಿ.ಡಿ. ರಸ್ತೆ, ಪ್ರವಾಸಿ ಮಂದಿರ ಮಾರ್ಗವಾಗಿ ಒನಕೆ ಓಬವ್ವ ವೃತ್ತ ತಲುಪಿ ನಂತರ ಮಾನವ ಸರಪಳಿ ನಿರ್ಮಿಸಲಾಯಿತು.

ನೀರು ಉಳಿಸಿ ಜೀವ ಉಳಿಸಿ, ನೀರು ಅಮೂಲ್ಯ ಅದನ್ನು ಬುದ್ಧಿವಂತಿಕೆಯಿಂದ ಬಳಸಿ, ಜಲ ಸಂರಕ್ಷಣೆ ನಮ್ಮೆಲ್ಲರ ಹೊಣೆ, ಮಳೆ ನೀರು ಸಂಗ್ರಹಿಸಿ ಮರುಬಳಕೆ ಮಾಡಿ, ಅಂತರ್ಜಲ ಮಿತ ಬಳಕೆ ಅತಿ ಬಳಕೆ, ನಮ್ಮ ಆಯ್ಕೆ ಸದ್ಬಳಕೆ, ನೀರು ಜೀವಜಲ, ಮಿತವಾಗಿ ಬಳಸಿ ಸಂರಕ್ಷಿಸಿ, ಸೇರಿದಂತೆ ಮತ್ತಿತರ ಘೋಷವಾಕ್ಯವಿರುವ ನಾಮಫಲಕಗಳನ್ನು ವಿದ್ಯಾರ್ಥಿಗಳು ಹಿಡಿದು ಘೋಷಣೆ ಕೂಗುವ ಮೂಲಕ ಸಾರ್ವಜನಿಕರಲ್ಲಿ ನೀರಿನ ಬಗ್ಗೆ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ನೆಹರು ಯುವ ಕೇಂದ್ರದ ಜಿಲ್ಲಾ ಯುವಜನ ಅಧಿಕಾರಿ ಎನ್.ಸುಹಾಸ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಪವಿತ್ರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಕಳಪೆ ಕೆಲಸ ಮಾಡಿದರೆ ಸುಮ್ಮನಿರುವುದಿಲ್ಲ

» **ಹೊಸದುರ್ಗ**

ಪಟ್ಟಣದ ಎಲ್ಲಾ ವಾರ್ಡುಗಳಲ್ಲೂ ಸಹಾ ವಿವಿಧ ಕಾಮಗಾರಿಗಳು ನಡೆಯುತ್ತಿದ್ದು ಆಯಾ ವಾರ್ಡುಗಳಲ್ಲಿ ಕಾಮಗಾರಿಯನ್ನ ಕೈಗೊಳ್ಳುವ ಗುತ್ತಿಗೆ ದಾರರು ಮಾಡುವ ಕೆಲಸಲ್ಲಿ ಕಳಫೆ ಕೆಲಸ ಮಾಡಿದರೆ ಸುಮ್ಮನಿರುವುದಿಲ್ಲ ಮಾಡವ ಕೆಲಸದ ಕಾಮಗಾರಿ ಗುಣಮಟ್ಟ ಮತ್ತು ಪರಿಪೂರ್ಣವಾಗಿರಬೇಕು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಕಾಮಗಾರಿಗಳ ಗುತ್ತಿಗೆದಾರರಿಗೆ ಛಾಟಿ ಏಟು ಬೀಸಿದರು

ಪಟ್ಟಣದ 12 ನೇ ವಾರ್ಡಿನ ಅಶೋಕ ರಂಗಮದಿರದಲ್ಲಿ ಭಾನುವಾರ ಆಯೋಜಿಸಲಾಗಿದ್ದ ಪಟ್ಟಣದ ವಿವಿಧ ವಾರ್ಡುಗಳಲ್ಲಿ ಅಮೃತ ನಗರೋತ್ತನ್ನ (ಪುರಸಭೆ) ಯೋಜನೆ (ಹಂತ–4) ರ ಅಡಿಯಲ್ಲಿ ಮಂಜೂರಾಗಿರುವ ಸಿಸಿ ಚರಂಡಿ ಡೆಕ್‌ಸ್ಲಾಬ್, ಇಂಟರ್ ಲಾಕ್ ಪೇವರ್ ಕಾಮಗಾರಿಗಳ ಭೂಮಿ ಪೂಜೆಯನ್ನ ನೆರವೇರಿಸಿ ಮಾತನಾಡಿದರು.

ಪಟ್ಟಣದ ಅಭಿವೃದ್ದಿಗಾಗಿ ಅಮೃತ ನಗರೋತ್ತನ್ನ ಯೋಜನೆಯಲ್ಲಿ ಒಟ್ಟು 4 ಕೋಟಿ 37 ಲಕ್ಷಕ್ಕೆ ಪಟ್ಟಣದ ವಿವಿಧ ವಾರ್ಡುಗಳಲ್ಲಿ ರಸ್ತೆ,ಚರಂಡಿ, ಸ್ಲಾಬ್, ಇತರೆ ಕಾಮಗಾರಿಗಳು ಜೋತೆಗೆ 15 ನೇ ಹಣಕಾಸು ಯೋಜನೆಯಡಿಯಲ್ಲಿ ರೂ 50 ಲಕ್ಷಕ್ಕೆ ಪ್ರಮುಖ ರಸ್ತೆಯ ಮಧ್ಯ ಭಾಗದಲ್ಲಿ ಡಿವೈಡರ್ ನಿರ್ಮಾಣ ಮತ್ತು ಅತ್ಯಾಧುನಿಕ ಲೈಟ್‌ಗಳನ್ನು ಅಳವಡಿಸುವ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಗಿದ್ದು ಪಟ್ಟಣದ ಶ್ರೀ ವೀರಭದ್ರೇಶ್ವರಸ್ವಾಮಿ ದೇವಸ್ಥಾನ ಮುಂಭಾಗ



ಸರ್ಕಾರಿ ಪಿ.ಯು ಕಾಲೇಜು ಗೇಟ್‌ನಿಂದ ಕಾಲೇಜುವರೆಗೆ ಮತ್ತು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಪಕ್ಕದ ರಸ್ತೆ ಮತ್ತು ಅಶೋಕ ರಂಗಮಂದಿರದ ಆವರಣದಲ್ಲಿ ಅತ್ಯಾಧುನಿಕ ಇಂಟರ್ ಲಾಕ್ ಪೇವರ್ ಕಾಮಗಾರಿಗಳಿಗೆ ಇಂದು ಭೂಮಿ ಪೂಜೆ ಮಾಡಲಾಗಿದ್ದು ಕೂಡಲೆ ಕಾಮಗಾರಿಗಳಿಗೆ ಚಾಲನೆ ಸಿಗಲಿದ್ದು ಕಾಮಗಾರಿಗಳು ಉತ್ತಮ ಗುಣ ಮಟ್ಟದಿಂದ ಕೂಡಿರಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದ ಅವರು ಪಟ್ಟಣದ ಸರ್ವತೋಮುಖ ಅಭಿವೃದ್ದಿಗೆ ಎಲ್ಲರೂ ಸಹಾ ಸಹಕರಿಸಿದ್ದು ವಿವಿಧ ಬಡಾವಣೆಗಳಲ್ಲಿ ಎಲ್ಲಾ ರಸ್ತೆಗಳನ್ನೂ ಸಹಾ ಮುಂದಿನ ದಿನಗಳಲ್ಲಿ ವಿಶೇಷ ಅನುದಾನ ಎಸ್‌ಎಫ್‌ಸಿ ಮತ್ತು ನಗರೋತ್ತಾನದಡಿಯಲ್ಲಿ ಸರ್ಕಾರದಿಂದ ಮಂಜೂರು ಮಾಡಿಸಿ 20 ಕೋಟಿ ಅನುದಾನದಲ್ಲಿ ಉಳಿದಂತಹ ಎಲ್ಲಾ ಕಾಮಗಾರಿಗಳನ್ನ ಕೈಗೊಳ್ಳುವ ಸಲುವಾಗಿ ಈಗಾಗಲೆ ಅನುದಾನಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು. ಈ ಸಂಧರ್ಬದಲ್ಲಿ ಪುರಸಭಾ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿ ಆನಂದ್, ಉಪಾಧ್ಯಕ್ಷೆ ಶ್ರೀಮತಿ ಗೀತಾಆಸಂಧಿ, ಸದಸ್ಯೆ ಶ್ರೀಮತಿ ಡಾ:ಸ್ವಾತಿಪ್ರದೀಪ್, ಅಗ್ರೋ ಹೆಚ್.ಶಿವಣ್ಣ, ಗ್ಯಾರಂಟಿ ಸಮಿತಿಯ ಸದಸ್ಯ ನವಾಜ್‌ಖಾನ್ (ಚಾ.ಬಾಬು) ಉದ್ಯಮಿ ಸದ್ಗುರುಪ್ರದೀಪ್, ಶ್ರೀಮತಿ ದೀಪಿಕಾಸತೀಶ್, ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ಆರೋಗ್ಯ ಶಾಖೆಯ ಕಲ್ಪನ, ಬಸವರಾಜು ಸೇರಿದಂತೆ ಪುರಸಭಾ ಸದಸ್ಯರುಗಳು ಉಪಸ್ಥಿತರಿದ್ದರು.

## ಆರೋಗ್ಯ ಭಾಗ್ಯವನ್ನು ಸಂಪಾದಿಸಿ: ವೈ.ರಾಜರಾಮ್



» **ಚಳ್ಳಕೆರೆ**

ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಆರೋಗ್ಯದ ಕಡೆ ಹೆಚ್ಚು ಗಮನನೀಡಬೇಕಿದೆ. ಇತ್ತೀಚಿನ ವರ್ಷಗಳಲ್ಲಿ ವೈದ್ಯಕೀಯ ಕ್ಷೇತ್ರ ಪ್ರಬಲವಾಗಿ ಬೆಳವಣಿಗೆಯಾಗಿದ್ದು, ರೋಗಗಳನ್ನು ಗುಣಪಡಿಸುವ ಅವಕಾಶ ದೊರಕಿದೆ. ವಿಶೇಷವಾಗಿ ಪ್ರಾಣಕ್ಕೆ ಅಪಾಯವೆಂದು ಭಾವಿಸುವ ಕ್ಯಾನ್ಸರ್ ರೋಗವನ್ನು ಸಹ ನಿಯಂತ್ರಿಸುವ ವ್ಯವಸ್ಥೆ ದೊರಕಿರುವುದು ಸಂತಸ ವಿಷಯವೆಂದು ನರಹರಿ ಸದ್ಗುರುಪೀಠದ ವೈ.ರಾಜರಾಮ್ ತಿಳಿಸಿದರು. ನರಹರಿ ನಗರದ ದೇವಸ್ಥಾನದ ಆವರಣದಲ್ಲಿ ನರಹರಿ ಸೇವಾಪ್ರತಿಷ್ಠಾನ, ನಾಗಸಿಂಹಾದ್ರಿ ಚಾರಿಟೀಸ್ ಹಾಗೂ ಬೆಂಗಳೂರಿನ ಶಂಕರ ಕ್ಯಾನ್ಸರ್ ಆಸ್ಪತ್ರೆ ಮತ್ತು ರೀಸರ್ಚ್ ಸೆಂಟರ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು. ಶಂಕರ ಕ್ಯಾನ್ಸರ್ ಆಸ್ಪತ್ರೆ ತಜ್ಞ ವೈದ್ಯ ಡಾ.ಸಿ.ನಾರಾಯಣಮೂರ್ತಿ ಮಾತನಾಡಿ, ಕೆಲವು ವರ್ಷಗಳ ಹಿಂದೆ ಕ್ಯಾನ್ಸರ್ ರೋಗಪೀಡಿತರಾದರೆ ಅವನು ಬದುಕುಳಿಯುವುದೇ ಕಷ್ಟವೆಂಬ ಭಾವನೆ ಜನರಲ್ಲಿತ್ತು. ಕ್ಯಾನ್ಸರ್‌ಪೀಡಿತರನ್ನು ಇಡೀ ಸಮಾಜ ದೂರವಿಡುತ್ತಿತ್ತು. ಆದರೆ, ಇತ್ತೀಚಿನ ವರ್ಷಗಳಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಅನೇಕ ಆವಿಷ್ಕಾರಗಳನ್ನು ಕಾಣಬಹುದು, ಕ್ಯಾನ್ಸರ್‌ರೋಗವನ್ನು ಸಹ ನಿಯಂತ್ರಿಸ ಬಲ್ಲ ಸಂಪೂರ್ಣವಾಗಿ ಗುಣಮುಖರಾಗುವ ಎಲ್ಲಾ ವ್ಯವಸ್ಥೆ ವೈದ್ಯರು ಕೊಡುವ ಚಿಕಿತ್ಸೆಯಲ್ಲಿದೆ. ಯಾರೂ ಸಹ ಹಿಂಜರಿಯದೆ ತಪಾಸಣೆಗೆ ಒಳಗಾಗಿ ಕ್ಯಾನ್ಸರ್ ಕಂಡುಬಂದರೆ ಅವರಿಗೆ ಸೂಕ್ತ ಚಿಕಿತ್ಸೆಯನ್ನು ಸಹ ನೀಡಲಾಗುವುದು ಎಂದರು. ತಜ್ಞ ವೈದ್ಯ ಡಾ.ಬಿ.ಆರ್.ನಾಗರಾಜು, ಬಿ.ಸಿ.ಸಂಜೀವಮೂರ್ತಿ, ಟ್ರಸ್ಟ್ ಕಾರ್ಯದರ್ಶಿ ಏಕಾಂತರಾಮ್, ಡಾ.ಎಲ್.ಎಸ್.ವೀರೇಶ್, ಮಕ್ಕಳತಜ್ಞ ಡಾ.ಬಿ.ಚಂದ್ರನಾಯ್ಕ, ಬಿ.ಸಿ.ವೆಂಕಟೇಶ್ ಮೂರ್ತಿ, ಎಂ.ರಾಮಚಂದ್ರಪ್ಪ, ಮಲ್ಲಿಕಾರ್ಜುನ್ ಮುಂತಾದವರು ಉಪಸ್ಥಿತರಿದ್ದರು.

## ಬೋರೇಶಗುರೂಜಿಯವರ 11ನೇ ಪುಣ್ಯಸ್ಮರಣೆ ಮಾ.26ರಂದು

**ಚಳ್ಳಕೆರೆ:** ಪ್ರತಿವರ್ಷದಂತೆ ಈ ವರ್ಷವೂ ಮೊಳಕಾಲ್ಮೂರು ತಾಲ್ಲೂಕು ಚಿಕ್ಕಂತಿ(ಕಂಪಳದೇವರಹಟ್ಟಿ) ಗ್ರಾಮದಲ್ಲಿ ಪೂಜ್ಯಬೋರೇಶಗುರೂಜಿಯವರ 11ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಮಾ.26ರ ಬುಧವಾರ 11ಗಂಟೆಗೆ ಮಠದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಮಠದ ಕಾರ್ಯಕಾರಿ ಸಮಿತಿಯ ಕಾರ್ಯದರ್ಶಿ ಬಿ.ಮಂಜಪ್ಪ ತಿಳಿಸಿದರು. ಅವರು, ಈ ಬಗ್ಗೆ ಮಾಹಿತಿ ನೀಡಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೋರೇಶಗುರೂಜಿ ಧಾರ್ಮಿಕ ಸಂಸ್ಥೆಯ ಶಿವಮೂರ್ತಿಮಹಾಸ್ವಾಮಿ ವಹಿಸಲಿದ್ದು, ಅಂದು ಬೆಳಗ್ಗೆ 10.30ಕ್ಕೆ ಗಂಗಾಪೂಜೆಯೊಂದಿಗೆ ಕಾರ್ಯಕ್ರಮ ಆರಂಭವಾಗಲಿದೆ. ಮಧ್ಯಾಹ್ನ 1ಕ್ಕೆ ಬೋರೇಶಗುರೂಜಿ ನಡೆದುಬಂದ ಬಗ್ಗೆ ಚಿಂತನ ಮಂಥನ ನಡೆಯಲಿದೆ. ಕಾರ್ಯಕ್ರಮದಲ್ಲಿ ಕಬೀರಾನಂದಮಠದ ಶಿವಾಲಿಂಗಾನಂದಸ್ವಾಮೀಜಿ, ಬಸವಮೂರ್ತಿ ಮಾದಾರಚನ್ನಯ್ಯಸ್ವಾಮೀಜಿ, ಬಸವಲಿಂಗಮಹಾಸ್ವಾಮಿ, ಷಡಾಕ್ಷರಿಮುನಿದೇಶಿಕೇಂದ್ರಮಹಾಸ್ವಾಮಿ, ಪ್ರಶಾಂತಸಾಗರಸ್ವಾಮೀಜಿ ಸಂಗಮೇಶ್ವರಸ್ವಾಮಿಜಿ ಮುಂತಾದವರು ಪಾಲ್ಗೊಳ್ಳುವರು.

**ಪ್ರಮುಖ ಸುದ್ದಿ**

# ಪುರಸಭೆ ನೂತನ ಕಟ್ಟಡಕ್ಕೆ 5 ಕೋಟಿಗೆ ಪ್ರಸ್ತಾವನೆ ಸಲ್ಲಿಕೆ

» **ಹೊಸದುರ್ಗ**

ಈಗಿರುವ ಪುರಸಭಾ ಕಟ್ಟಡ ಸೋರುತ್ತಿದ್ದು ಈ ಕಟ್ಟಡ ದುಸ್ಥಿತಿಯಲ್ಲಿದೆ ಈ ಕಟ್ಟಡವನ್ನ ತೆರವುಗೊಳಿಸಿ ಪುರಸಭೆಗೆ ನೂತನ ಕಟ್ಟಡ ನಿರ್ಮಾಣ ಮಾಡುವ ಸಲುವಾಗಿ ಜಿ ಪ್ಲಸ್ ತ್ರಿ ಮಾದರಿಯಲ್ಲಿ ಕಟ್ಟಡ ನಿರ್ಮಿಸುವ ಸಲುವಾಗಿ ಈಗಾಗಲೆ ನೀಲಿ ನಕ್ಷೆ ತಯಾರಿಸಿದ್ದು 5 ಕೋಟಿ ರೂ ವಿಶೇಷ ಅನುದಾನ ಮಂಜೂರಾತಿಗಾಗಿ ಈಗಾಗಲೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಪಟ್ಟಣದ ಪುರಸಭಾ ಆವರಣದಲ್ಲಿ ಭಾನುವಾರ ಕಸ ವಿಲೇವಾರಿ ಮಾಡುವ ನಾಲ್ಕು ನೂತನ ಅಟೋ ಟಿಪ್ಪರ್‌ಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಹೊಸದುರ್ಗ ಪುರಸಭೆಯಲ್ಲಿ ಸ್ವಚ್ಚಭಾರತ್ ಮಿಷನ್ 1.0 ಅನುದಾನದಡಿಯಲ್ಲಿ ಮನೆ ಮನೆ



ಕಸ ಸಂಗ್ರಹಣೆಗಾಗಿ 19 ಲಕ್ಷ ರೂ ವೆಚ್ಚದಲ್ಲಿ ನಾಲ್ಕು ಅಟೋ ಟಿಪ್ಪರ್‌ಗಳನ್ನ ಜಿಲ್ಲಾಡಳಿತದಿಂದ ನೇರವಾಗಿ ಖರೀದಿಸಿ ಇಂದು ಪುರಸಭೆಗೆ ಅಸ್ತಾಂತರಿಸಿ ಲೋಕಾರ್ಪಣೆ ಮಾಡಿ ಪುರಸಭೆಗೆ ನೀಡಿರುವ ಈ ಅಟೋ ಟಿಪ್ಪರ್ಗಳು ಚಿಕ್ಕವಾಗಿರುವುದರಿಂದ ಪಟ್ಟಣದ ಪ್ರತಿಯೊಂದು ಬಡಾವಣೆಯಲ್ಲಿರುವ ಸಣ್ಣ ಸಣ್ಣ ಓಣಿಗಳಲ್ಲಿ ಸಂಚರಿಸಿ ಕಸವನ್ನ ಸಂಗ್ರಹಿಸಲಿವೆ ಎಂದರು.ದೊಡ್ಡ ದೊಡ್ಡ ರಸ್ತೆಗಳು ಮತ್ತು ದೊಡ್ಡ ಓಣಿಗಳು ಇರುವ ಪ್ರದೇಶಗಳಲ್ಲಿ ದೊಡ್ಡ ದೊಡ್ಡ ಟಿಪ್ಪರ್‌ಗಳು ಹಾಗೂ ಟ್ಯಾಕ್ಟರ್‌ಗಳು ಹೋಗಿ ಸಾರ್ವಜನಿಕರು ವಿಂಗಡಿಸಿದ ಕಸವನ್ನ ಸಂಗ್ರಹಿಸಲಿವೆ, ಪಟ್ಟಣದ 23 ವಾರ್ಡುಗಳ ಸಾರ್ವಜನಿಕರು ಕಸವನ್ನ ಎಲ್ಲೆಂದರಲ್ಲಿ ಬಿಸಾಡದೆ ಕಸ ವಿಲೇವಾರಿ ಮಾಡುವ ಅಟೋಗಳ ಪ್ರಯೋಜನವನ್ನ ಸಾರ್ವಜನಿಕರು ಪಡೆದುಕೊಂಡು ಅಟೋಗಳು ಬಂದ ತಕ್ಷಣ ಹಸಿ ಕಸ ಮತ್ತು ಒಣ ಕಸವನ್ನ ಅಟೋ ಟಿಪ್ಪರ್‌ಗಳಲ್ಲಿ ಹಾಕಿ ಪಟ್ಟಣವನ್ನ ಸ್ವಚ್ಚವಾಗಿಟ್ಟು ಕೊಳ್ಳಿ ಎಂದು ಕರೆ ನೀಡಿದರು.

ಈ ಸಂಧರ್ಬದಲ್ಲಿ ಪುರಸಭಾ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿಆನಂದ್, ಉಪಾಧ್ಯಕ್ಷೆ ಶ್ರೀಮತಿ ಗೀತಾಆಸಂಧಿ, ಸದಸ್ಯೆ ಶ್ರೀಮತಿ ಡಾ:ಸ್ವಾತಿಪ್ರದೀಪ್, ಗ್ಯಾರಂಟಿ ಸಮಿತಿಯ ಸದಸ್ಯ ನವಾಜ್‌ಖಾನ್ (ಚಾ.ಬಾಬು) ಅಗ್ರೋ ಹೆಚ್.ಶಿವಣ್ಣ, ಶ್ರೀಮತಿದೀಪಿಕಾಸತೀಶ್, ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ಆರೋಗ್ಯ ಶಾಖೆಯ ಕಲ್ಪನ, ಬಸವರಾಜು ಸೇರಿದಂತೆ ಪುರಸಭಾ ಸದಸ್ಯರುಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಶಿವಶಿಂಪಿ: ವಿಶ್ವ ಮಹಿಳಾ ದಿನಾಚರಣೆ ಇಂದು

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಲಿಂಗಾಯತ ಶಿವಶಿಂಪಿ ಮಹಿಳಾ ಘಟಕದವತಿಯಿಂದ ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಶಿವಶಿಂಪಿ ಮಹಿಳಾ ಸಂಭ್ರಮ ಕಾರ್ಯಕ್ರಮವನ್ನು ಮಾ. 24ರ ಸೋಮವಾರ ಸಂಜೆ 5 ಗಂಟೆಗೆ ನಗರದ ಶ್ರೀ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಲಿಂಗಾಯತ ಶಿವಶಿಂಪಿ ಮಹಿಳಾ ಘಟಕದ ಕಾರ್ಯಕಾರಿಣಿ ಸಮಿತಿ ತಿಳಿಸಿದೆ. ಈ ಕಾರ್ಯಕ್ರಮದಲ್ಲಿ ಹೆರಿಗೆ ಮತ್ತು ಸ್ತ್ರೀರೋಗ ತಜ್ಞರಾದ ಶ್ರೀಮತಿ ಡಾ. ಜ್ಯೋತಿ ಶರತ್‌ಕುಮಾರ್ ರವರು ಆಧುನಿಕ ಬದುಕಿನಲ್ಲಿ ಮಹಿಳೆಯ ಆರೋಗ್ಯದ ಬಗ್ಗೆ ಹಾಗೂ ಶಿಕ್ಷಕಿಯಾದ ಶ್ರೀಮತಿ ಗೀತಾ ಭರಮಸಾಗರ ಇವರು ಪ್ರಸ್ತುತ ಸಮಾಜದಲ್ಲಿ ಆಡಂಬರದ ವಿವಾಹ ಅಗತ್ಯವೆ? ಎಂಬ ವಿಷಯದ ಬಗ್ಗೆ ಉಪನ್ಯಾಸ ನೀಡಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಲಿಂಗಾಯತ ಶಿವಶಿಂಪಿ ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾದ ಶ್ರೀಮತಿ ಅನಿತಾ ಮುರುಗೇಶ್ ವಹಿಸಲಿದ್ದು, ಕಾರ್ಯದರ್ಶಿಗಳಾದ ಶ್ರೀಮತಿ ಕವಿತಾ ಪಂಪಾಪತಿ ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಮಹಿಳಾ ಘಟಕದ ಪದಾಧಿಕಾರಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ವಿವಿಧ ಕ್ರೀಡಾ ಸ್ಪರ್ದೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣಾ ಸಮಾರಂಭ ನಡೆಯಲಿದೆ.

### ಸರ್ಕಾರಿ ಪ್ರಾಥಮಿಕ ಶಾಲೆ ಮಕ್ಕಳಿಗೆ ಉಚಿತ ಬ್ಯಾಗ್ ಹಾಗೂ ಸ್ವೆಟರ್ ವಿತರಣೆ



» **ಹೊಳಲ್ಕೆರೆ**

ಸರ್ಕಾರಿ ಶಾಲೆಗೆ ಬರುವ ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡುತ್ತಿದೆ. ಸದುಪಯೋಗಪಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಿ ಎಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು. ಭರಮಸಾಗರದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ಗ್ರಾಮೀಣ ಸಾಕ್ಷರತಾ ಸಂಸ್ಥೆ ನವದೆಹಲಿ ಇವರ ಸಹಯೋಗದಲ್ಲಿ ಚಿತ್ರದುರ್ಗ ತಾಲ್ಲೂಕಿನ ಸರ್ಕಾರಿ ಪ್ರಾಥಮಿಕ ಶಾಲಾ ಮಕ್ಕಳಿಗೆ ಹಮ್ಮಿಕೊಳ್ಳಲಾಗಿದ್ದ ಉಚಿತ ಬ್ಯಾಗ್ ಹಾಗೂ ಸ್ವೆಟರ್‌ಗಳನ್ನು ವಿತರಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.ಅಟಲ್ ಬಿಹಾರಿ ವಾಜಪೇಯಿ ದೇಶದ ಪ್ರಧಾನ ಮಂತ್ರಿಯಾಗಿದ್ದಾಗ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಮಂಜೂರು ಮಾಡಿದರು. ಸರ್ವ ಶಿಕ್ಷ ಅಭಿಯಾನ ಕೂಡ ಅವರ ಕಾಲದಲ್ಲಿ ಆರಂಭವಾಯಿತು. ಚತುಷ್ಪಥ ಹೆದ್ದಾರಿ ನಿರ್ಮಿಸಿದ್ದರಿಂದ ಲಕ್ಷಾಂತರ ವಾಹನಗಳು ಸಂಚರಿಸುತ್ತಿದ್ದರೂ ಅಪಘಾತಗಳ ಸಂಖ್ಯೆ ಹಿಂದಿಗಿಂತ ಈಗ ಕಡಿಮೆಯಾಗಿದೆ ಎಂದರು.

ಶಿಕ್ಷಣದಿಂದ ವಂಚಿತರಾಗಬಾರದೆಂದು ಸರ್ಕಾರಿ ಬಡ ಮಕ್ಕಳಿಗೆ ಎಲ್ಲಾ ರೀತಿಯ ಸವಲತ್ತುಗಳನ್ನು ನೀಡುತ್ತಿದೆ. ನಿಮ್ಮ ನಿಮ್ಮ ಭವಿಷ್ಯಗಳನ್ನು ರೂಪಿಸಿಕೊಂಡು ಸಮಾಜದಲ್ಲಿ ಸತ್ಪ್ರಜೆಗಳಾಗಿ. 1994–95 ರಲ್ಲಿ ಒಂದು ಲಕ್ಷ ಶಿಕ್ಷಕರುಗಳನ್ನು ನೇಮಕ ಮಾಡಿಕೊಳ್ಳಲಾಯಿತು. ಆಗ ಶೇ.50 ರಷ್ಟು ಹೆಣ್ಣು ಮಕ್ಕಳಿಗೆ ಆದ್ಯತೆ ನೀಡಲಾಯಿತು. ಸರ್ಕಾರಿ ಶಾಲೆಗೆ ಬರುವ ಮಕ್ಕಳನ್ನು ನಿಮ್ಮ ಮಕ್ಕಳಂತೆ ನೋಡಿಕೊಳ್ಳಿ. ಈ ಶಾಲೆಗೆ ದೊಡ್ಡ ಪ್ರಮಾಣದಲ್ಲಿ ಮಕ್ಕಳು ಬರುತ್ತಿರುವುದರಿಂದ ಒಂಬತ್ತು ಶಾಲೆಗಳನ್ನು ಕಟ್ಟಿಸುತ್ತೇನೆ. ಮುಂದಿನ ದಿನಗಳಲ್ಲಿ ಇನ್ನ ಹದಿನಾಲ್ಕು ಶಾಲೆಗಳನ್ನು ನೀಡುತ್ತೇನೆ. ಗ್ರಾಮೀಣ ಭಾಗದಿಂದ ಬರುವ ಬಡ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಬಾರದೆಂದು ಸ್ವಂತ ಖರ್ಚಿನಿಂದ ಬಸ್‌ಗಳ ವ್ಯವಸ್ಥೆ ಕಲ್ಪಿಸುತ್ತೇನೆ. ಡ್ರೈವರ್, ಕಂಡಕ್ಟರ್‌ಗೆ ಸಂಬಳ ನೀಡಿ ಬಸ್‌ಗೆ ಡೀಸೆಲ್ ಕೂಡ ಹಾಕಿಸುತ್ತೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಭರವಸೆ ನೀಡಿದರು.ಶಾಲೆಯ ಎಸ್‌.ಡಿ.ಎಂ.ಸಿ.ಅಧ್ಯಕ್ಷರಶೀದ್,ಗ್ರಾಮಪಂಚಾಯಿತಿ ಅಧ್ಯಕ್ಷೆ ಜ್ಯೋತಿ ರುದ್ರೇಶ್, ಸಂಪತ್‌ಕುಮಾರ್, ಡಿ.ಎಸ್.ಪ್ರವೀಣ್, ಕುಮಾರ್, ಈಶ್ವರ್, ಗ್ರಾಮ ಪಂಚಾಯಿತಿ ಸದಸ್ಯರುಗಳಾದ ಸಂತೋಷ್, ಕೊಟ್ರೇಶ್, ಮಂಜುನಾಥ್ ಹಾಗೂ ಶಿಕ್ಷಕರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಸಂಘ-ಸಂಸ್ಥೆಗಳ ಸದಸ್ಯರ ನವೀಕರಣಗೊಳಿಸಲು ಸೂಚನೆ

» **ದಾವಣಗೆರೆ**

ಜಿಲ್ಲೆಯಲ್ಲಿ ನೊಂದಣಿಯಾಗಿರುವ ಸಂಘ, ಸಂಸ್ಥೆಗಳು 5 ವರ್ಷಗಳಿಗೂ ಮೇಲ್ಪಟ್ಟು ಲೆಕ್ಕಪತ್ರಗಳನ್ನು ದಾಖಲಿಸದೆ, ನವೀಕರಣಗೊಳ್ಳದೆ ಇದ್ದಲ್ಲಿ ಅಂತಹ ಸಂಘ–ಸಂಸ್ಥೆಗಳನ್ನು ಸದಸ್ಯರ ಹಾಗೂ ಸಂಘಗಳ ಹಿತದೃಷ್ಟಿಯಿಂದ ಪ್ರತಿ ವರ್ಷಕ್ಕೆ ರೂ.3000/ ನಂತೆ ದಂಡ ಪಾವತಿಸಿ ಅಗತ್ಯ ದಾಖಲೆಗಳೊಂದಿಗೆ ಇದೇ ಮಾ.31 ರೊಳಗೆ ಸಲ್ಲಿಸಿ ನವೀಕರಣ ಅಥವಾ ಲೆಕ್ಕಪತ್ರಗಳನ್ನು ದಾಖಲಿಸಿಕೊಳ್ಳಲು ತಿಳಿಸಿದೆ. ಇಲ್ಲವಾದಲ್ಲಿ ರದ್ದುಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾ ಸಂಘಗಳ ನೊಂದಣಾಧಿಕಾರಿ ಹಾಗೂ ಸಹಕಾರ ಸಂಘಗಳ ಉಪನಿಬಂಧಕ ಟಿ.ಮಧುಶ್ರಿನಿವಾಸ ತಿಳಿಸಿದ್ದಾರೆ.

### ಸರ್ಕಾರಿ ನೌಕರರ ಜಿಲ್ಲಾ ಸಂಘದ ಪದಾಧಿಕಾರಿಗಳ ಪದಗ್ರಹಣ

# ಏ.16,17 ರಂದು ನೌಕರರ ಕ್ರೀಡಾಕೂಟ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆಯ ವಿವಿಧ ಪದಾಧಿಕಾರಿಗಳ ಪದಗ್ರಹಣ ನಗರದ ಸರ್ಕಾರಿ ನೌಕರರ ಸಂಘ ಭವನದ ಸಭಾಂಗಣದಲ್ಲಿ ನೆರವೇರಿತು. ಅಲ್ಲದೆ ಬರುವ ಏಪ್ರಿಲ್ 16 ಮತ್ತು 17 ರಂದು ಜಿಲ್ಲಾ ಸರ್ಕಾರಿ ನೌಕರರ ವಾರ್ಷಿಕ ಕ್ರೀಡಾಕೂಟ ಆಯೋಜಿಸಲು ಇದೇ ಸಂದರ್ಭದಲ್ಲಿ ನಿರ್ಧಾರ ಕೈಗೊಳ್ಳಲಾಯಿತು.

ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆಯ 2024–29 ರ ಅವಧಿಗೆ ಆಯ್ಕೆಯಾದ ನೂತನ ನಿರ್ದೇಶಕರಿಗೆ ಪದಾಧಕಾರಿಗಳ ಹುದ್ದೆಗಳನ್ನು ಹಂಚಿಕೆ ಮಾಡಲಾಗಿದ್ದು, ಜಿಲ್ಲಾ ಶಾಖೆಗೆ ಅಧ್ಯಕ್ಷರಾಗಿ ಮಾಲತೇಶ ಮುದಜ್ಜಿ, ಜಿಲ್ಲಾ ಕಾರ್ಯದರ್ಶಿಯಾಗಿ ಶ್ರೀನಿವಾಸ ಆರ್., ಜಿಲ್ಲಾ ಖಜಾಂಚಿಯಾಗಿ ಮಲ್ಲಿಕಾರ್ಜುನ ಎ, ರಾಜ್ಯ ಪರಿಷತ್ ಸದಸ್ಯರಾಗಿ ರಾಜಪ್ಪ ಎಸ್ ಅವರು ಆಯ್ಕೆಯಾಗಿ, ಅಧಿಕಾರ ವಹಿಸಿಕೊಂಡಿದ್ದರು. ಇದೀಗ ಜಿಲ್ಲಾ ಶಾಖೆಯ ವಿವಿಧ ಪದಾಧಿಕಾರಿಗಳ ಸ್ಥಾನಗಳಿಗೆ ನಿರ್ದೇಶಕರನ್ನು ಆಯ್ಕೆ ಮಾಡಲಾಗಿದ್ದು, ಗೌರವಾಧ್ಯಕ್ಷರನ್ನಾಗಿ ನಾರಾಯಣಸ್ವಾಮಿ ಎಂ., ಕಾರ್ಯಾಧ್ಯಕ್ಷರಾಗಿ ವಿಶ್ವನಾಥ ಬಿ.ಟಿ., ಹಿರಿಯ ಉಪಾಧ್ಯಕ್ಷರಾಗಿ ಡಾ. ಚಂದ್ರಕಾಂತ್ ನಾಗಸಮುದ್ರ, ಉಪಾಧ್ಯಕ್ಷರಾಗಿ ತುಕಾರಾಂರಾವ್ ಬಿ.ವಿ., ವಿಮಲಾಕ್ಷಿ ಬಿ., ಪೂಜಾರ್‌ಹೆಚ್.ರುದ್ರಮುನಿಬಿ.,ನಯಾಜ್ ಅಹ್ಮದ್ ಖಾನ್,ಸಹಕಾರ್ಯದರ್ಶಿಯಾಗಿ ಯಶವಂತಕುಮಾರ್, ಸುನೀಲ್‌ಕುಮಾರ್ ಸೇರಿದಂತೆ ಜಂಟಿಕಾರ್ಯದರ್ಶಿಗಳು, ಸಂಘಟನಾ ಕಾರ್ಯದರ್ಶಿಗಳು, ಸಾಂಸ್ಕೃತಿಕ ಕಾರ್ಯದರ್ಶಿಗಳು, ಕ್ರೀಡಾ ಕಾರ್ಯದರ್ಶಿಗಳು, ಆಂತರಿಕ ಲೆಕ್ಕ ಪರಿಶೋಧಕರು ಒಳಗೊಂಡಂತೆ ವಿವಿಧ ಪದಾಧಿಕಾರಿಗಳ ಹುದ್ದೆಗೆ ನೇಮಕಗೊಂಡವರ ಪದಗ್ರಹಣ ಸಮಾರಂಭದಲ್ಲಿ, ನೂತನ ಪದಾಧಿಕಾರಿಗಳಿಗೆ ಪ್ರಮಾಣಪತ್ರ ವಿತರಿಸಿ ಸನ್ಮಾನಿಸಲಾಯಿತು. ಬಳಿಕ ಜಿಲ್ಲಾ ಅಧ್ಯಕ್ಷ ಮಾಲತೇಶ್ ಮುದಜ್ಜಿ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಜಿಲ್ಲಾ ಸರ್ಕಾರಿ ನೌಕರರ ವಾರ್ಷಿಕಕ್ರೀಡಾಕೂಟಆಯೋಜಿಸುವಬಗ್ಗೆ ಚರ್ಚಿಸಿ, ಎಲ್ಲ ನೌಕರ ವೃಂದದವರಿಗೂ ಅನುಕೂಲವಾಗುವಂತೆ ಕ್ರೀಡಾಕೂಟವನ್ನು ಏಪ್ರಿಲ್ 16 ಮತ್ತು 17 ರಂದು ಜರುಗಿಸಲು ನಿರ್ಧರಿಸಲಾಯಿತು. ಒಳಾಂಗಣ ಮತ್ತು ಹೊರಾಂಗಣ ಸ್ಪರ್ಧೆಗಳನ್ನು ಆಯ್ಕೆ ಮಾಡಿಕೊಂಡು, ಎಲ್ಲಾ ತಾಲ್ಲೂಕುಗಳಿಂದ ರಾಜ್ಯ ಸರ್ಕಾರಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಕೂಟದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು, ಕ್ರೀಡಾಕೂಟದಲ್ಲಿ ಭಾಗವಹಿಸುವ ಎಲ್ಲ ನೌಕರರಿಗೆ ಒಓಡಿ ಸೌಲಭ್ಯ ಕಲ್ಪಿಸುವುದು, ನೌಕರರು ಪಾಲ್ಗೊಳ್ಳಲು ಆನ್‌ಲೈನ್‌ನಲ್ಲಿ ಕಡ್ಡಾಯವಾಗಿ ನೊಂದಣಿ ಮಾಡಿಕೊಳ್ಳಲು ಅಗತ್ಯ ವ್ಯವಸ್ಥೆ ಕೈಗೊಳ್ಳಬೇಕು. ನೌಕರರು ತಮ್ಮ ಕೆಜಿಐಡಿ ಸಂಖ್ಯೆಯೊಂದಿಗೆ ಆಯಾ ಕಚೇರಿ ಮುಖ್ಯಸ್ಥರಿಂದ ದೃಢೀಕರಣ ಪತ್ರವನ್ನು ಹಾಜರುಪಡಿಸಬೇಕು. ಬೇಸಿಗೆ ಕಾಲವಾಗಿರುವುದರಿಂದ, ಕ್ರೀಡಾಂಗಣದಲ್ಲಿ ಕುಡಿಯುವ ನೀರು, ನೆರಳು, ತುರ್ತು ವೈದ್ಯಕೀಯ ನೆರವು, ಊಟೋಪಹಾರ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲು ಪ್ರತ್ಯೇಕವಾಗಿ ಉಪಸಮಿತಿಗಳನ್ನು ರಚಿಸಲು ನಿರ್ಧರಿಸಲಾಯಿತು.ವಾರ್ಷಿಕಕ್ರೀಡಾಕೂಟ ಆಯೋಜನೆ ಕುರಿತಂತೆ ಸಂಬಂಧಪಟ್ಟ ಎಲ್ಲ ಇಲಾಖಾ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಸಲಾಗುವುದು. ಎಲ್ಲಾ ವೃಂದದ ನೌಕರರ ಸಹಭಾಗಿತ್ವದಲ್ಲಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಲು ಎಲ್ಲ ಉಪಸಮಿತಿಯವರು, ಪದಾಧಿಕಾರಿಗಳು ತಮಗೆ ವಹಿಸುವ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿಭಾಯಿಸಿ ಸಹಕಾರ ನೀಡಬೇಕು ಎಂದು ಅಧ್ಯಕ್ಷ ಮಾಲತೇಶ ಮುದಜ್ಜಿ ಅವರು ಇದೇ ಸಂದರ್ಭದಲ್ಲಿ ಮನವಿ ಮಾಡಿದರು.



ನೌಕರರ ಸಂಘಕ್ಕೆ ನೂತನವಾಗಿ ನಿರ್ದೇಶಕರಾಗಿ ಆಯ್ಕೆಯಾಗಿರುವ ರಾಜೇಂದ್ರ ಚಕ್ರವರ್ತಿ ಅವರು ಮಾತನಾಡಿ, ಜಿಲ್ಲಾ ಸರ್ಕಾರಿ ನೌಕರರ ಸಂಘದಿಂದ ವಾರ್ಷಿಕ ಕ್ರೀಡಾ ಕೂಟವನ್ನು ಆಯೋಜಿಸಿರುವುದು ನೌಕರರ ಹಿತದೃಷ್ಟಿಯಿಂದ ಸ್ವಾಗತಾರ್ಹವಾಗಿದೆ. ನಾವೆಲ್ಲರೂ ಒಟ್ಟಾಗಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಲು ಸಹಕಾರ ನೀಡುತ್ತೇವೆ ಎಂದರು. ಜಿಲ್ಲಾ ಸಂಘದ ಕಾರ್ಯದರ್ಶಿ ಶ್ರೀನಿವಾಸ ಆರ್., ಖಜಾಂಚಿ ಮಲ್ಲಿಕಾರ್ಜುನ ಎ, ರಾಜ್ಯ ಪರಿಷತ್ ಸದಸ್ಯ ರಾಜಪ್ಪ ಎಸ್ ಸೇರಿದಂತೆ ನೌಕರರ ಸಂಘದ ವಿವಿಧ ಪದಾಧಿಕಾರಿಗಳು, ನಿರ್ದೇಶಕರುಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ರೋಟರಿ ಬಾಲಭವನದಲ್ಲಿ ಮಹಿಳಾ ದಿನಾಚರಣೆ

» **ಚಿತ್ರದುರ್ಗ**

ಸಂವಿಧಾನದಲ್ಲಿ ಮಹಿಳೆಯರಿಗೆ ಸಮಾನತೆ,ಹಕ್ಕು, ಬಾಧ್ಯತೆ ನೀಡಿದೆ ಎಂದು ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ ಗೌರವಾಧ್ಯಕ್ಷ ಹಿರಿಯ ನ್ಯಾಯವಾದಿ ಬಿ.ಕೆ.ರಹಮತ್‌ವುಲ್ಲಾ ತಿಳಿಸಿದರು.

ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ, ಜಿಲ್ಲಾ ಶರಣ ಸಾಹಿತ್ಯ ಪರಿಷತ್, ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ರೋಟರಿ ಬಾಲಭವನದಲ್ಲಿ ಭಾನುವಾರ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.




ಪ್ರತಿ ವರ್ಷವೂ ಮಾ.8 ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಮಹಿಳೆಯ ಮೇಲಾಗುವ ಕೌಟುಂಬಿಕ ದೌರ್ಜನ್ಯ, ವರದಕ್ಷಿಣೆ ಕಿರುಕುಳ ನಿಂತಿಲ್ಲ. ಕಾನೂನಿನಲ್ಲಿ ಮಹಿಳೆಗೆ ಸಾಕಷ್ಟು ರಕ್ಷಣೆಯಿದೆ. ಹೆಣ್ಣು ಅಬಲೆಯಲ್ಲ. ಸಬಲೆ ಎಲ್ಲಾ ರಂಗದಲ್ಲಿಯೂ ಸಾಧನೆ ಮಾಡುತ್ತಿದ್ದಾಳೆ. ಪುರಷನಿಗೆ ಸರಿಸಮನಾಗಿ ದುಡಿಯುತ್ತಿರುವ ಹೆಣ್ಣಿಗೆ ಅನುಕಂಪ ಬೇಕಿಲ್ಲ. ಸ್ವಾವಲಂಭಿಯಾಗಿ ದುಡಿದು ಜೀವಿಸಲು ಅವಕಾಶ ಸಿಕ್ಕಾಗ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಗೆ ನಿಜವಾದ ಅರ್ಥ ಸಿಗುತ್ತದೆ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಭಾರತಿ ಆರ್.ಬಣಕಾರ್ ಮಾತನಾಡಿ ಲೈಂಗಿಕ ದೌರ್ಜನ್ಯ ಹೆಚ್ಚಳವಾಗುತ್ತಿರುವುದರಿಂದ ಹೆಣ್ಣು ಮಕ್ಕಳು ಜಾಸ್ತಿ ಶಿಕ್ಷಣ ಪಡೆಯಲು ಆಗುತ್ತಿಲ್ಲ. ಅಪ್ರಾಪ್ತ ವಯಸ್ಸಿಗೆ ವಿವಾಹ ಮಾಡುವುದು ಅಕ್ಷಮ್ಯ ಅಪರಾಧ. ಇದರಿಂದ ಪೋಷಕರುಗಳಿಗೂ ಶಿಕ್ಷೆಯಾಗುತ್ತದೆ. ಹೆಣ್ಣು–ಗಂಡೆಂಬ ವ್ಯತ್ಯಾಸ ಬೇಡ. ಹೆಣ್ಣಿಗೆ ಗಂಡಿನಷ್ಟೆ ಸಮಾನವಾದ ಶಿಕ್ಷಣ ಬೇಕು. ತಾಯಂದಿರು ಮಕ್ಕಳ ಮೇಲೆ ನಿಗಾ ಇಡಬೇಕು. ಶಿಕ್ಷಣದ ಜೊತೆ ಸಂಸ್ಕಾರ ಕಲಿಸುವ ಜವಾಬ್ದಾರಿ ಪೋಷಕರುಳ ಮೇಲಿದೆ ಎಂದರು.

ಮಹಿಳೆಯರ ಮೇಲೆ ಗ್ಯಾಂಗ್ ರೇಪ್ ಆಗುತ್ತಿದೆ. ಕಾನೂನು ಬಗ್ಗೆ ಅರಿವು ಮೂಡಿಸಿಕೊಳ್ಳಿ. ಸರ್ಕಾರದಿಂದ ಸಿಗುವ ಸೌಲಭ್ಯ ಹಾಗೂ ಹಕ್ಕುಗಳನ್ನು ಬಳಸಿಕೊಂಡು ತನ್ನ ಕಾಲ ಮೇಲೆ ತಾನು ನಿಂತು ಸ್ವಾವಲಂಭಿಯಾಗಿ ಬದುಕುವುದನ್ನು ಕಲಿಯಬೇಕು. ಇಲಾಖೆಯಿಂದ ಸ್ತ್ರೀಶಕ್ತಿ ಸಂಘಗಳನ್ನು ರಚಿಸಲಾಗಿದೆ. ಹದಿನೈದರಿಂದ ಇಪ್ಪತ್ತು ಮಹಿಳೆಯರು ಸೇರಿ ಒಂದು ಸಂಘವನ್ನು ಕಟ್ಟಿಕೊಳ್ಳಬಹುದು. ಇದರಿಂದ ಆರ್ಥಿಕವಾಗಿ ಸಬಲೀಕರಣಗೊಳ್ಳಲು ಸಹಾಯವಾಗಲಿದೆ. ಸಾಂತ್ವನ, ಸಖಿ ಯೋಜನೆಗಳಿವೆ. ಇದರಿಂದ ಮಹಿಳೆಯರಿಗೆ ಸಾಕಷ್ಟು ಅನುಕೂಲಗಳು ದೊರಕುತ್ತವೆ. ದೇವದಾಸಿ ಮಹಿಳೆಯರು,ಲೈಂಗಿಕ ಕಾರ್ಯಕರ್ತೆಯರು, ಹೆಚ್.ಐ.ವಿ.ಸೋಂಕಿತ ಮಹಿಳೆಯರಿಗೆ ಆಶ್ರಯವಿದೆ. ಮಹಿಳೆಯರ ರಕ್ಷಣೆಗಾಗಿಯೇ ಮಹಿಳಾ ಆಯೋಗವಿದೆ ಎಂದು ಹೇಳಿದರು.

ಮಂಜುನಾಥ್ ಭಾಗವತ್ ಮಾತನಾಡಿ ಎಲ್ಲಿ ಸ್ತ್ರೀಯರನ್ನು ಗೌರವಿಸುತ್ತಾರೋ ಅಲ್ಲಿ ದೇವತೆಗಳು ನೆಲೆಸುತ್ತವೆಂಬ ನಂಬಿಕೆಯಿದೆ. ಮಹಿಳೆಯರ ಮೇಲೆ ಅತ್ಯಾಚಾರ, ದಬ್ಬಾಳಿಕೆ, ದೌರ್ಜನ್ಯಗಳು ನಡೆಯುತ್ತಲಿವೆ. ಮಹಿಳೆಯರು ಪುರುಷರಿಗಿಂತ ಕಮ್ಮಿಯಿಲ್ಲ. ಎಲ್ಲಾ ರಂಗಗಳಲ್ಲಿಯೂ ತನ್ನ ಶಕ್ತಿ ಸಾಮರ್ಥ್ಯವನ್ನು ಪ್ರದರ್ಶಿಸುತ್ತಿದ್ದಾಳೆ. ಭಾರತೀಯ ಪರಂಪರೆಯಲ್ಲಿ ಮಹಿಳೆಗೆ ಉನ್ನತ ಸ್ಥಾನವಿದೆ. ಪುರುಷರಿಗಿಂತ ಮಹಿಳೆ ಮೇಲಿದ್ದಾಳೆಂದು ನುಡಿದರು.

## ಚಿತ್ರದುರ್ಗದಲ್ಲಿ ಬಂದ್‌ಗೆ ಯಾವುದೇ ಪ್ರತಿಕ್ರಿಯೆ ದೊರಕಲಿಲ್ಲ




» **ಚಿತ್ರದುರ್ಗ**

ಬೆಳಗಾವಿಯಲ್ಲಿ ಮರಾಠಿ ಪುಂಡರ ಉಪಟಳ ವಿರೋಧಿಸಿ ವಿವಿಧ ಸಂಘಟನೆಗಳು ಶನಿವಾರ ಕರ್ನಾಟಕ ಬಂದ್‌ಗೆ ಕರೆ ನೀಡಿದ್ದು, ಚಿತ್ರದುರ್ಗದಲ್ಲಿ ಬಂದ್‌ಗೆ ಯಾವುದೇ ಪ್ರತಿಕ್ರಿಯೆ ದೊರಕಲಿಲ್ಲ. ಅಂಗಡಿ ಮುಂಗಟ್ಟು ತೆರೆದಿದ್ದು, ವ್ಯಾಪಾರ ವಹಿವಾಟುಗಳು ಎಂದಿನಂತೆ ನಡೆಯಿತು.ಬಸ್, ಆಟೋಗಳು ಮಾಮೂಲಿನಂತೆ ಸಂಚರಿಸಿದವು. ಶಾಲೆ–ಕಾಲೇಜುಗಳಿಗೆ ಮಕ್ಕಳು ನಿರ್ಭಯವಾಗಿ ಹೋಗುತ್ತಿದ್ದುದು ಕಂಡು ಬಂದಿತು. ಬೆಳಗಿನಿಂದಲೆ ಗಾಂಧಿ ವೃತ್ತ, ಒನಕೆ ಓಬವ್ವ ಸರ್ಕಲ್ ಹಾಗೂ ಎಸ್.ಬಿ.ಎಂ.ವೃತ್ತದಲ್ಲಿ ಪೊಲೀಸ್ ಪಹರೆ ಹಾಕಲಾಗಿತ್ತು. ಪ್ರತಿಭಟನಾಕಾರರು ಎಲ್ಲಿಯೂ ಬಲವಂತವಾಗಿ ಅಂಗಡಿಗಳನ್ನು ಮುಚ್ಚಿಸಲಿಲ್ಲ.

**ಕರವೆ ಪ್ರತಿಭಟನೆ :** ಕರ್ನಾಟಕ ರಕ್ಷಣಾ ವೇದಿಕೆ ಹೆಚ್.ಶಿವರಾಮೇಗೌಡ ಬಣದ ಕಾರ್ಯಕರ್ತರು ಗಾಂಧಿ ವೃತ್ತದಿಂದ ಒನಕೆ ಓಬವ್ವ ವೃತ್ತದವರೆಗೆ ಮೆರವಣಿಗೆ ಮೂಲಕ ಆಗಮಿಸಿ ಬೆಳಗಾವಿಯಲ್ಲಿ ಮರಾಠರ ಪುಂಡಾಟಿಕೆ ವಿರುದ್ದ ಧಿಕ್ಕಾರಗಳನ್ನು ಕೂಗಿದರು.ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಕರವೆ ಜಿಲ್ಲಾಧ್ಯಕ್ಷ ಕೆ.ಆರ್. ಮಂಜುನಾಥ್ ಬೆಳಗಾವಿಯಲ್ಲಿ ಕನ್ನಡಿಗರ ಮೇಲೆ ಮರಾಠರು ನಡೆಸುತ್ತಿರುವ ದೌರ್ಜನ್ಯ, ದಬ್ಬಾಳಿಕೆ ನಿಲ್ಲಬೇಕು. ರಾಜ್ಯದ ಜನತೆಯ ಒಳಿತಿಗಾಗಿ ನಾವುಗಳು ಪ್ರತಿಭಟನೆಗೆ ಇಳಿದಿದ್ದೇವೆ. ಎಂ.ಇ.ಎಸ್. ಶಿವಸೇನೆ ಸಂಘಟನೆಯನ್ನು ರಾಜ್ಯದಲ್ಲಿ ನಿಷೇಧಿಸಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಬೇಕಾದಿತೆಂದು ರಾಜ್ಯ ಸರ್ಕಾರವನ್ನು ಎಚ್ಚರಿಸಿದರು.ಬೆಳಗಾವಿಯಲ್ಲಿ ನಮ್ಮ ರಾಜಕಾರಣಿಗಳು ಮತ ಓಲೈಕೆಗಾಗಿ ಮರಾಠರ ಉಪಟಳಕ್ಕೆ ಕಡಿವಾಣ ಹಾಕದಿರುವುದು ನಾಚಿಕೆಗೇಡಿನ ಸಂಗತಿ. ಬೆಳಗಾವಿ ನಮ್ಮದು ಒಂದಿಚು ಭೂಮಿಯನ್ನು ಮಹಾರಾಷ್ಟ್ರಕ್ಕೆ ಬಿಟ್ಟುಕೊಡುವುದಿಲ್ಲ. ಕರ್ನಾಟಕದ ರಾಜಕಾರಣಿಗಳು ನೆಲ, ಜಲ, ಭಾಷೆಯ ಬಗ್ಗೆ ಅಭಿಮಾನ ಮೈಗೂಡಿಸಿಕೊಂಡು ಕನ್ನಡಿಗರ ರಕ್ಷಣೆಗೆ ಮುಂದಾಗಬೇಕೆಂದು ಮಂಜುನಾಥ್ ಒತ್ತಾಯಿಸಿದರು. ಕರವೇ ತಾಲ್ಲೂಕು ಅಧ್ಯಕ್ಷ ಹೆಚ್.ತಿಪ್ಪೇಸ್ವಾಮಿ, ಪ್ರಧಾನ ಕಾರ್ಯದರ್ಶಿ ಪಿ.ಜಿ.ಗೋವಿಂದರಾಜು, ಹೊಳಲ್ಕೆರೆ ತಾಲ್ಲೂಕು ಅಧ್ಯಕ್ಷ ಹನುಮಂತಪ್ಪ, ಮೊಳಕಾಲ್ಮುರು ತಾಲ್ಲೂಕು ಅಧ್ಯಕ್ಷ ಓಬಣ್ಣಗೌಡ, ಯುವ ಕರ್ನಾಟಕ ವೇದಿಕೆ ಜಿಲ್ಲಾಧ್ಯಕ್ಷ ರವಿಕುಮಾರ್‌ನಾಯ್ಕ ಭಾಗವಹಿಸಿದ್ದರು.

## ದಾವಣಗೆರೆ: ಮಾ.25 ರಂದು ಉದ್ಯೋಗಮೇಳ

ದಾವಣಗೆರೆ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಮಾದರಿ ವೃತ್ತಿ ಕೇಂದ್ರದ ವತಿಯಿಂದ ಇದೇ ಮಾ.25 ರಂದು ಬೆಳಗ್ಗೆ 10 ಗಂಟೆಗೆ ನಗರದ ಜಿಲ್ಲಾಧಿಕಾರಿಗಳಲ್ಲಿನ ಕೊಠಡಿ ಸಂಖ್ಯೆ–51ರಲ್ಲಿನ ಉದ್ಯೋಗ ವಿನಿಮಯ ಕೇಂದ್ರದಲ್ಲಿ "ಉದ್ಯೋಗಮೇಳ" ಆಯೋಜಿಸಲಾಗಿದೆ. ಮೇಳದಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸುತ್ತಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎಸ್‌ಎಸ್‌ಎಲ್‌ಸಿ, ಐ.ಟಿ.ಐ, ಡಿಪ್ಲೋಮಾ, ಪಿಯುಸಿ, ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಿವೆ. ಆಸಕ್ತ ಅಭ್ಯರ್ಥಿಗಳು ಕನಿಷ್ಠ 5 ಸ್ವವಿವರದ ಪ್ರತಿ ಮತ್ತು ಆಧಾರ್ ನಂಬರ್‌ನೊಂದಿಗೆ ಭಾಗವಹಿಸಿ, ಉದ್ಯೋಗಮೇಳದ ಸದುಪಯೋಗ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7483808321 ಗೆ ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿ ಡಿ.ರವೀಂದ್ರ ತಿಳಿಸಿದ್ದಾರೆ.

### ಪ್ರಮುಖ ಸುದ್ದಿ

# ಕ್ಷೇತ್ರದ ಅಭಿವೃದ್ದಿಗೆ ಸಾವಿರಾರು ಕೋಟಿ ರೂ.ಮಂಜೂರು

» **ಹೊಳಲ್ಕೆರೆ**

ಕ್ಷೇತ್ರದ ಸರ್ವಾಂಗೀಣ ಅಭಿವೃದ್ದಿಗೆ ಸಾವಿರಾರು ಕೋಟಿ ರೂ.ಗಳನ್ನು ಮಂಜೂರು ಮಾಡಿಸಿಕೊಂಡು ಹಗಲು–ರಾತ್ರಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆಂದು ಶಾಸಕ ಡಾ.ಎಂ. ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ತುಪ್ಪದಹಳ್ಳಿ ಗ್ರಾಮದಲ್ಲಿ 1.52 ಕೋಟಿ ರೂ.ವೆಚ್ಚದಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ಪ್ರತಿ ಮನೆ ಮನೆಗೂ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿಗೆ ಭಾನುವಾರ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.



ರಾಜ್ಯದಲ್ಲಿ ಸರ್ಕಾರ ಯಾವುದಿದೆ ಎನ್ನುವುದು ಮುಖ್ಯವಲ್ಲ. ನಾನು ಆಡಳಿತ ಪಕ್ಷದ ಶಾಸಕನಲ್ಲ. ವಿರೋಧ ಪಕ್ಷದಲ್ಲಿದ್ದರು ಹಣ ತಂದು ಕೆಲಸ ಮಾಡುವ ಯೋಗ್ಯತೆಯಿಟ್ಟುಕೊಂಡಿದ್ದೇನೆನ್ನುವುದನ್ನು ನೀವುಗಳು ನೆನಪಿನಲ್ಲಿಟ್ಟುಕೊಳ್ಳಬೇಕು. ತಾಕತ್ತು ತೋರಿಸುವ ಶಕ್ತಿ ರಾಜಕಾರಣಿಗಿದ್ದರೆ ಹಣ ತನ್ನಷ್ಟಕ್ಕೆ ತಾನೆ ಬರುತ್ತದೆ. ರೈತರ ತೋಟಗಳು ಒಣಗಬಾರದೆಂದು ತಾಲ್ಲೂಕಿನಾದ್ಯಂತ ಹದಿನೈದು ಕಡೆ ಪವರ್ ಸ್ಟೇಷನ್‌ಗಳನ್ನು ಕಟ್ಟಿಸುತ್ತಿದ್ದೇನೆ. ಮಳೆ ನೀರು ವ್ಯರ್ಥವಾಗಿ ಹರಿದು ಹೋಗುವುದನ್ನು ತಡೆಯುವುದಕ್ಕಾಗಿ ಚೆಕ್‌ಡ್ಯಾಂಗಳನ್ನು ಕಟ್ಟಿಸಿರುವುದರಿಂದ ಬೋರ್‌ವೆಲ್‌ಗಳಲ್ಲಿ ನೀರಿನ ಮಟ್ಟ ಜಾಸ್ತಿಯಾಗಿದೆ. ಇನ್ನು ಏಳೆಂಟು ತಿಂಗಳಲ್ಲಿ ಅಪ್ಪರ್‌ಭದ್ರಾ ಯೋಜನೆಯಿಂದ ಎಲ್ಲಾ ಕೆರೆಗಳಿಗೂ ನೀರು ತುಂಬಿಸುತ್ತೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಭರವಸೆ ನೀಡಿದರು.ತಾಳಿಕಟ್ಟೆಯಲ್ಲಿ ಎರಡು ಸಾವಿರ ಗುಡಿಸಲುಗಳನ್ನು ಹಾಕಿಕೊಂಡಿದ್ದಾರೆ. ಚುನಾವಣೆಯಲ್ಲಿ ನನಗೆ ಮತ ಹಾಕಿಲ್ಲವೆಂದು ನಿರ್ಲಕ್ಷಿಸುವುದಿಲ್ಲ. ಆಸ್ಪತ್ರೆ, ಸಮುದಾಯ ಭವನ ಕಟ್ಟಿಸಿದ್ದೇನೆ. ಹೆಣ್ಣು ಮಕ್ಕಳು ಶೌಚಕ್ಕೆ ಹೊರಗಡೆ ಹೋಗಬಾರದೆಂದು ಪೂನಾದಿಂದ ಮೊಬೈಲ್ ಟಾಯ್ಲೆಟ್‌ಗಳನ್ನು ತರಿಸಿದ್ದೇನೆ. ಆಕಸ್ಮಿಕವಾಗಿ ಬೆಂಕಿ ಬಿದ್ದರೆ ಗುಡಿಸಲು ಸುಟ್ಟು ಹೋಗುತ್ತದೆಂದು ಫೈರ್ ಇಂಜಿನ್‌ಗಳನ್ನು ಇರಿಸಿದ್ದೇನೆ. ಅಂಬ್ಯುಲೆನ್ಸ್ ವ್ಯವಸ್ಥೆಯಿದೆ. ತಾಲ್ಲೂಕಿನಾದ್ಯಂತ ಉತ್ತಮ ಗುಣಮಟ್ಟದ ಸಿ.ಸಿ.ರಸ್ತೆ, ಶಾಲಾ–ಕಾಲೇಜು

ಹೈಟೆಕ್ ಆಸ್ಪತ್ರೆ, ಕೆರೆ ಕಟ್ಟೆ, ಚೆಕ್‌ಡ್ಯಾಂಗಳನ್ನು ಕಟ್ಟಿಸಿದ್ದೇನೆ. ಬಯಲುಸೀಮೆ ವರ್ಷಕ್ಕೊಂದು ಮಳೆ ಬರುವುದರಿಂದ ಬ್ರಿಡ್ಸ್ ಕಂ ಬ್ಯಾರೇಜ್, ಚೆಕ್‌ಡ್ಯಾಂಗಳನ್ನು ಕಟ್ಟಿಸಿರುವುದರಿಂದ ರೈತರು ಸಂತೋಷವಾಗಿದ್ದಾರೆ. ರಂಗಾಪುರದ ಬಳಿ ಹರಿದು ಹೋಗುವ ನೀರಿಗೆ ಚೆಕ್‌ಡ್ಯಾಂ ಕಟ್ಟಿಸಿದ್ದೇನೆ. ಒಟ್ಟಾರೆ ತಾಲ್ಲೂಕಿನಾದ್ಯಂತ ಎಲ್ಲೆಲ್ಲಿ ಏನೇನು ಕೆಲಸ ಮಾಡಿದರೆ ಜನರಿಗೆ ಅನುಕೂಲವಾಗುತ್ತದೆನ್ನುವುದನ್ನು ಮನದಲ್ಲಿಟ್ಟುಕೊಂಡು ಪ್ರಾಮಾಣಿಕವಾಗಿ ಕೆಲಸ ಮಾಡುವ ರಾಜಕಾರಣಿ ನಾನು ಎಂದು ಡಾ.ಎಂ.ಚಂದ್ರಪ್ಪ ಹೇಳಿದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಮಹೇಶಣ್ಣ, ಗ್ರಾಮ ಪಂಚಾಯಿತಿ ಸದಸ್ಯರುಗಳಾದ ಧನಂಜಯ್, ಲೋಕೇಶ್, ಉಮಾಪತಿ, ಮಲ್ಲಿಕಾರ್ಜುನ್ ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಇಂದು ದಿವ್ಯಾಂಗ ವ್ಯಕ್ತಿಗಳಿಗೆ ಸಾಧನ, ಸಲಕರಣೆಗಳ ವಿತರಣೆ

» **ಚಿತ್ರದುರ್ಗ**

ಭಾರತೀಯ ಸ್ಟೇಟ್ ಬ್ಯಾಂಕ್, ಭಾರತೀಯ ಕೃತಕ ಅಂಗಗಳ ಉತ್ಪಾದನಾ ನಿಗಮ (ಅಲಿಂಕೋ), ಜಿಲ್ಲಾಡಳಿತ ವತಿಯಿಂದ ಇದೇ ಮಾರ್ಚ್ 24ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ "ದಿವ್ಯಾಂಗ ವ್ಯಕ್ತಿಗಳಿಗೆ ಉಚಿತ ಸಾಧನ ಮತ್ತು ಸಲಕರಣೆಗಳ ವಿತರಣೆ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಸಂಸದ ಗೋವಿಂದ ಎಂ.ಕಾರಜೋಳ ಸಾಧನ ಸಲಕರಣೆಗಳ ವಿತರಣೆ ಮಾಡುವರು. ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಶಾಸಕರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್.ಮಂಜುನಾಥ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ರಾಘವೇಂದ್ರ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್ ಭಾಗವಹಿಸುವರು. ಕೇಂದ್ರ ಸರ್ಕಾರದ ಅಡಿಪ್ ಯೋಜನೆ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಸಿ.ಎಸ್.ಆರ್ (ಸಾಮಾಜಿಕ ಹೊಣೆಗಾರಿಕೆ ಕಾರ್ಯನಿಧಿ) ಅನುದಾನದಡಿ ಜಿಲ್ಲೆಯಲ್ಲಿನ 512 ವಿಕಲಚೇತನ ಫಲಾನುಭವಿಗಳಿಗೆ ಉಚಿತ ಸಾಧನ-ಸಲಕರಣೆಗಳನ್ನು ವಿತರಿಸಲು ಗುರುತಿಸಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

### 27ರವರೆಗೆ ಸರಸ್ ಮೇಳ

» **ಚಿತ್ರದುರ್ಗ**

ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್.ಆರ್.ಎಲ್.ಎಂ) ಯೋಜನೆಯಡಿ ನಗರದ ಗಾಯಿತ್ರಿ ಕಲ್ಯಾಣ ಮಂಟಪದಲ್ಲಿ ಮಾರ್ಚ್ 25 ರಿಂದ 27ರವರೆಗೆ ಜಿಲ್ಲಾ ಮಟ್ಟದ ಸರಸ್ ಮೇಳ ಆಯೋಜಿಸಲಾಗಿದೆ. ಮೇಳದಲ್ಲಿ ಸ್ವ ಸಹಾಯ ಗುಂಪಿನ ಸದಸ್ಯರು ಉತ್ಪಾದಿಸುವ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಮಾಡಲಾಗುವುದು. ಸಾರ್ವಜನಿಕರು ಸ್ವ-ಸಹಾಯ ಗುಂಪುಗಳು ಉತ್ಪಾದಿಸಿರುವ ವಸ್ತುಗಳನ್ನು ಖರೀದಿಸಿ ಪ್ರೋತ್ಸಾಹ ನೀಡುವಂತೆ ಪ್ರಕಟಣೆ ತಿಳಿಸಿದೆ.

### ಮಾ.24 ರಂದು ವಿಶ್ವ ಕ್ಷಯರೋಗ ದಿನ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ಇವರ ಸಹಯೋಗದಲ್ಲಿ ನಗರದ ವಿದ್ಯಾನಗರದಲ್ಲಿನ ಕುವೆಂಪು ಕನ್ನಡ ಭವನದಲ್ಲಿ ಬೆಳಿಗ್ಗೆ 10.30ಕ್ಕೆ ವಿಶ್ವ ಕ್ಷಯರೋಗ ದಿನ ಹಮ್ಮಿಕೊಳ್ಳಲಾಗಿದೆ. ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಉಪಸ್ಥಿತರಿರುವರು. ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಸುರೇಶ್.ಬಿ ಇಟ್ನಾಳ್ ಉದ್ಘಾಟಿಸುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಷಣ್ಮುಖಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಂ.ಬಿ.ನಾಗೇಂದ್ರಪ್ಪ, ವಿಶ್ವ ಆರೋಗ್ಯ ಸಂಸ್ಥೆ ಸಲಹೆಗಾರರಾದ ಡಾ.ಆಸ್ಮಾ ಬಾನು ವರದ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಅಧೀಕ್ಷಕಿ ಡಾ.ಎಸ್.ಪಿ.ಮಧು, ಜಿಲ್ಲಾ ಆಯುಷ್ ಅಧಿಕಾರಿ ಡಾ.ಎ.ಎಂ.ರೇಣುಕಾರಾಧ್ಯ, ಸರ್ವೇಕ್ಷಣಾಧಿಕಾರಿ ಡಾ.ಜಿ.ಡಿ.ರಾಘವನ್, ಜಿಲ್ಲಾ ಮಲೇರಿಯಾಧಿಕಾರಿ ಡಾ.ಕೆ.ಹೆಚ್.ಗಂಗಾಧರ, ಕುಟುಂಬ ಕಲ್ಯಾಣಾಧಿಕಾರಿ ಡಾ.ಎಂ.ಕೆ.ರುದ್ರಸ್ವಾಮಿ, ಕುಷ್ಠರೋಗ ನಿವಾರಣಾಧಿಕಾರಿ ಡಾ.ಮಂಜುನಾಥ ಪಾಟೀಲ್, ಜಿಲ್ಲಾ ಐಇಸಿ ಅಧಿಕಾರಿ ಡಾ.ಸುರೇಶ್ ಬಾರ್ಕಿ, ದಾವಣಗೆರೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ದೇವರಾಜ್ ಪಟಗೆ, ಚನ್ನಗಿರಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಶಿವಕುಮಾರ, ಹರಿಹರ ತಾಲ್ಲೂಕು ಆರೋಗ್ಯಾಧಿಕಾರಿ ಡಾ,ಅಬ್ದುಲ್ ಖಾದರ್, ಜಗಳೂರು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಪಿ.ಆರ್.ವಿಶ್ವನಾಥ್, ಹೊನ್ನಾಳಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್.ಹೆಚ್.ಗಿರೀಶ್, ಹೆಚ್.ಐ.ವಿ ಮತ್ತು ಏಡ್ಸ್ ವಿಭಾಗದ ಜಿಲ್ಲಾ ನೋಡಲ್ ಅಧಿಕಾರಿ ಡಾ.ಶಿವರಾಜ್, ಜೆ.ಯು.ಡಿ.ಆರ್, ಟಿಬಿ ನೋಡಲ್ ಅಧಿಕಾರಿ ಡಾ.ಶಶಿಕಾಂತ, ಎನ್.ವಿ.ಹೆಚ್.ಸಿ.ಪಿ ನೋಡಲ್ ಅಧಿಕಾರಿ ಡಾ.ಗಿರೀಶ್ ಹಾಗೂ ಎ,ಆರ್.ಟಿ ವೈದ್ಯಾಧಿಕಾರಿ ಡಾ.ಪಿ.ಆರ್.ಕೃತಿ ಭಾಗವಹಿಸಲಿದ್ದಾರೆ ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಪಿ.ಡಿ.ಮುರುಳೀಧರ ತಿಳಿಸಿದ್ದಾರೆ.

# ಜಲಸಂಪನ್ಮೂಲ ಹಾಳು ಮಾಡುವವರ ವಿರುದ್ಧ ಲಾಠಿ ಎತ್ತಿ: ಡಾ.ಜಿ. ಎನ್.ಮಲ್ಲಿಕಾರ್ಜುನಪ್ಪ

» **ಚಿತ್ರದುರ್ಗ**

ನಾವೆಲ್ಲಾ ನೀರಿನ ಸಂರಕ್ಷಣೆ, ನೀರಿನ ಪ್ರಾಮುಖ್ಯತೆ ಬಗ್ಗೆ ಬರೀ ಭಾಷಣ ಮಾಡುವ ಬದಲು, ಜಲಸಂರಕ್ಷಣೆಗಾಗಿ ಆರತಿ ಎತ್ತುವ ಬದಲು, ಜಲಸಂಪನ್ಮೂಲವನ್ನು ಹಾಳು ಮಾಡುವವರ ವಿರುದ್ಧ ಲಾಠಿ ಎತ್ತಿ ಎಂದು ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಅಧ್ಯಕ್ಷ ಡಾ.ಜಿ. ಎನ್.ಮಲ್ಲಿಕಾರ್ಜುನಪ್ಪ ತಿಳಿಸಿದರು.

ನಗರದ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಚಿತ್ರದುರ್ಗ ಸೈನ್ಸ್ ಫೌಂಡೇಶನ್‌ನಿಂದ ಹಮ್ಮಿಕೊಂಡಿದ್ದ ವಿಶ್ವ ಜಲ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಜನಸಾಮಾನ್ಯರಿಗೆ. ನೀರಿನ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಬೇಕಿದೆ. ಪ್ರತಿವರ್ಷವೂ ಪ್ರಮುಖ ಘೋಷವಾಕ್ಯಗಳ ಮೂಲಕ ವಿದ್ಯಾರ್ಥಿಗಳು ಮತ್ತು ಶಿಕ್ಷಿತರಿಗೆ ತಿಳಿಸಿಕೊಡಬೇಕಾಗಿದೆ. ನೀರಿನ ಸಂರಕ್ಷಣೆ ಬಗ್ಗೆ ಪ್ರತಿಯೊಬ್ಬರ ಜವಾಬ್ದಾರಿ ಇದೆ. ಬೇಜವಾಬ್ದಾರಿ ಹೇಳಿಕೆಗಳನ್ನು ಕಿತ್ತುಹಾಕುವಂತಹ ಕಾನೂನನ್ನು ಜಾರಿಗೆ ತರುವ ತುರ್ತು ಅವಶ್ಯಕತೆ ಇದೆ ಎಂದರು.ಬೇರೆ ದೇಶಗಳಲ್ಲಿ ಇಂತಹ ವಿಷಯಗಳ ಬಗ್ಗೆ ಸಭಾಸದನಗಳಲ್ಲಿ ಮೊದಲು ಚರ್ಚೆ ಮಾಡಿ ಕಾನೂನನ್ನು ತರುತ್ತಾರೆ. ನಮ್ಮ



ದೇಶದಲ್ಲಿ ಮೊದಲು ಕಾನೂನನ್ನು ಜಾರಿಗೆ ತಂದು, ಸಭಾಸದನಗಳಲ್ಲಿ ವಿಷಯಗಳನ್ನು ಅಂಗೀಕರಿಸಿನಂತರಪ್ರಜೆಗಳಿಗೆತಿಳಿಸುತ್ತಾರೆ. ಭೂಮಿಯ ಮೇಲಿನ ಪ್ರತಿ ಜೀವಿಗೂ ನೀರು ಅತ್ಯವಶ್ಯಕ. ಅತ್ಯಂತ ಪ್ರಮುಖವಾದ ನೈಸರ್ಗಿಕ ಸಂಪನ್ಮೂಲ. ಬಹುತೇಕ ನಾಗರೀಕತೆಗಳು ನೀರಿನ ಮೂಲದಿಂದಲೇ ಉಗಮವಾಗಿವೆ. ಇಡೀ ಮಾನವ ಇತಿಹಾಸದಲ್ಲಿ ನೀರು ಪ್ರಮುಖವಾಗಿ ಬಳಕೆಯಾಗುವ ಉಪಯುಕ್ತ ಅಂಶವಾಗಿದೆ. ಭೂಮಿಯ ಮೇಲೆ ನೀರು ಇಲ್ಲದಿದ್ದಲ್ಲಿ ಬಹುತೇಕ ಜೀವಿಗಳ ಉಗಮವಾಗಲೀ, ಜೀವನವಾಗಲೀ ಸಾಗುತ್ತಲೇ ಇರಲಿಲ್ಲ. ನೀರು ಇಲ್ಲದ ಜಗತ್ತಿನಲ್ಲಿ ಯಾವ ಜೀವಿಯೂ ಬದುಕಲಾರದು ಎಂದು ತಿಳಿಸಿದರು.ಸಂಸ್ಥೆಯ ಡಾ.ಕೆ.ಎಂ.ವೀರೇಶ್ ಮಾತನಾಡಿ, ಯಾವುದೇ ರೀತಿಯ ವ್ಯವಸ್ಥೆ ಒಳಿತಾಗಬೇಕಾದರೆ ಜನರಲ್ಲಿ ವೈಚಾರಿಕತೆ, ವೈಜ್ಞಾನಿಕ ಮನೋಭಾವ ಮೂಡಿಸುವುದು ಇಂದಿನ ಅವಶ್ಯ. ಬೇಜವಾಬ್ದಾರಿ ಕಾನೂನುಗಳನ್ನು ಜಾರಿಗೆ ತರುವುದು ಅನವಶ್ಯಕ ಎಂದರು.ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಕಾರ್ಯದರ್ಶಿ ಎಚ್.ಎಸ್.ಟಿ.ಸ್ವಾಮಿ ಮಾತನಾಡಿ, ನೀರು ಇಲ್ಲದೇ ಇರುವ ಈ ಭೂಮಿಯನ್ನು ಊಹಿಸಲೂ ಸಾಧ್ಯವಿಲ್ಲ. ನೀರು ಇಲ್ಲದೇ ಹೋಗಿದ್ದಲ್ಲಿ ರಾಜ್ಯ ರಾಜ್ಯಗಳ ನಡುವೆ, ರಾಷ್ಟ್ರ ರಾಷ್ಟ್ರಗಳ ನಡುವೆ ಜಗಳ ನಡೆಯುತ್ತಲೇ ಇರಲಿಲ್ಲ. ಒಂದು ವೇಳೆ ಮೂರನೇ ಮಹಾಯುದ್ಧ ಭವಿಷ್ಯದಲ್ಲಿ ನಡೆದಲ್ಲಿ ಅದು ನೀರಿಗಾಗಿ ಎಂದು ತಿಳಿಸಿದರು.ಪ್ರಾಂಶುಪಾಲೆ ಎಂ.ಆರ್.ಜಯಲಕ್ಷ್ಮಿ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ವಿಶ್ವ ಜಲ ದಿನದ ಮಹತ್ವ ತಿಳಿಸಿದರು. ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಉಪಾಧ್ಯಕ್ಷ ಚಳ್ಳಕೆರೆ ಯರ್‍ರಿಸ್ವಾಮಿ, ಖಜಾಂಚಿ ಕೆ.ವಿ.ನಾಗಲಿಂಗರೆಡ್ಡಿ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ವೈಷ್ಣವಿ ಎಸ್ ನಿರೂಪಿಸಿದ ಈ ಕಾರ್ಯಕ್ರಮದಲ್ಲಿ ಎಸ್.ಎಂ.ಅಮೂಲ್ಯ ಸ್ವಾಗತಿಸಿ, ಪಿ.ಕಾಂತರಾಜ್ ವಂದಿಸಿದರು.

# ಡಾ.ಬುಕಾನನ್ ಬರೆಯದ ವಿಚಾರಗಳಿಲ್ಲ

» **ಚಿತ್ರದುರ್ಗ**

ಹಳೆ ಮೈಸೂರು ಭಾಗದಲ್ಲಿ ಡಾ.ಬುಕಾನನ್ ಒಂದು ವರ್ಷ ಎರಡು ತಿಂಗಳು ಹದಿಮೂರು ದಿನಗಳ ಕಾಲ ಪ್ರವಾಸ ಮಾಡಿ ಅನೇಕ ಮಾಹಿತಿಗಳನ್ನು ಪಡೆದು ತಮ್ಮ ಬರವಣಿಗೆಯಲ್ಲಿ ದಾಖಲಿಸುತ್ತಾರೆಂದು ಆಂಗ್ಲ ಭಾಷಾ ಉಪನ್ಯಾಸಕ ಹಾಗೂ ವಿಶ್ರಾಂತ ಪ್ರಾಚಾರ್ಯರಾದ ಪ್ರೊ. ಎಂ.ಜಿ.ರಂಗಸ್ವಾಮಿ ತಿಳಿಸಿದರು.

ಚಿತ್ರದುರ್ಗ ಇತಿಹಾಸ ಕೂಟ ಇತಿಹಾಸ-ಸಂಸ್ಕೃತಿ-ಸಂಶೋಧನೆಗಳ ವಿಚಾರ ವೇದಿಕೆ, ರೇಣುಕಾ ಪ್ರಕಾಶನ ಇವರುಗಳ ಸಹಯೋಗದೊಂದಿಗೆ ಐ.ಎಂ.ಎ.ಹಾಲ್‌ನಲ್ಲಿ ಭಾನುವಾರ ನಡೆದ 50 ನೇ ಉಪನ್ಯಾಸ ಕಾರ್ಯಕ್ರಮದಲ್ಲಿಚಿತ್ರದುರ್ಗ ಜಿಲ್ಲೆಡಾ.ಬುಕಾನನ್ ಮತ್ತು ಡಾಬ್ಸ್ ಕುರಿತಂತೆ ಮಾತನಾಡಿದರು.

ವೃತ್ತಿಯಿಂದ ವೈದ್ಯರಾಗಿದ್ದ ಡಾ.ಬುಕಾನನ್ ಅವರದು ವಿಶಿಷ್ಟವಾದ ವ್ಯಕ್ತಿತ್ವ. ವೈದ್ಯಕೀಯ ಶಾಸ್ತ್ರ ಓದಿದ್ದರೂ ಬಟಾನಿಸ್ಟ್ ಆಗಿದ್ದರು. ಆಡು ಮುಟ್ಟದ ಸೊಪ್ಪಿಲ್ಲ

ಡಾ.ಬುಕಾನನ್ ಬರೆಯದ ವಿಚಾರಗಳಿಲ್ಲ. ಕರ್ನಾಟಕದ ಭಾಗದ ಬೆಳೆಗಳಿಂದ ಹಿಡಿದು ಉತ್ತರಾಣಿ ಕಡ್ಡಿಯವರೆಗೂ ಬರೆದಿದ್ದಾರೆ. ಯಾರ್‍ಯಾರುಕತ್ತೆಗಳನ್ನುಸಾಕುತ್ತಿದ್ದರುಎನ್ನುವುದನ್ನು ಬಿಟ್ಟಿಲ್ಲ. ಎಲ್ಲವನ್ನು ಬರವಣಿಗೆ ಮೂಲಕ ದಾಖಲು ಮಾಡಿದ್ದಾರೆ. ವಿರಾಟ ಸ್ವರೂಪದ ವ್ಯಕ್ತಿತ್ವವುಳ್ಳ ಡಾ.ಬುಕಾನನು ಶ್ರೀರಂಗಪಟ್ಟಣದಲ್ಲಿ ಟಿಪ್ಪುಸುಲ್ತಾನ್ ಯುದ್ದದಲ್ಲಿ ಸೆಣಸಾಡಿದ ಮಾಹಿತಿಯನ್ನು ಸಂಗ್ರಹಿಸಿದ್ದಾರೆಂದರು.

ಮಂಡ್ಯ, ಮೈಸೂರಿಗೆ ಆಗಮಿಸಿದ ಡಾ.ಬುಕಾನನು ರಾಜಾಜ್ಞೆ ಪಡೆದುಕೊಂಡು ಅನೇಕ ಊರುಗಳಿಗೆ ಸಂಚರಿಸಿ ಎಲ್ಲೆಲ್ಲಿ ಏನೇನು ಮಾಹಿತಿಯಿದೆ ಎನ್ನುವುದನ್ನು ಸಂಗ್ರಹಿಸುವುದು ಆತನ ಗುಣ. ಹದಿನೆಂಟು ದಿನಗಳ ಕಾಲ ಶ್ರೀರಂಗಪಟ್ಟಣದಲ್ಲಿ ಅಧ್ಯಯನ ನಡೆಸಿ ನಂತರ



ಮಂಡ್ಯ, ಬೆಂಗಳೂರಿಗೆ ಬರುತ್ತಾನೆ. ಶಿರಾ, ತುಮಕೂರು, ಗುಬ್ಬಿ,

ಕರೂರು, ಮಂಗಳೂರು, ಉಡುಪಿ, ಬನವಾಸಿ, ಇಕ್ಕೇರಿ, ಶಿವಮೊಗ್ಗ, ಸೂಳೆಕೆರೆ, ಬಸವಾಪಟ್ಟಣ, ಹರಿಹರದಲ್ಲಿ ಪ್ರಯಾಣಿಸುವ ಡಾ.ಬುಕಾನನ್ 1801 ಏ.15 ರಂದು ಚಿತ್ರದುರ್ಗ ಜಿಲ್ಲೆ ಪ್ರವೇಶಿಸಿ ಎರಡು ದಿನ ಉಳಿದುಕೊಂಡು ಶಿವಪ್ಪ ಎನ್ನುವ ಶಾನುಭೋಗನನ್ನು ಹಿಡಿದು ಇಲ್ಲಿನ ಮಾಹಿತಿ ಪಡೆದುಕೊಳ್ಳುತ್ತಾರೆ ಎಂದರು.

ದೊಡ್ಡಸಿದ್ದವ್ವನಹಳ್ಳಿಯಲ್ಲಿ ಒಂದು ದಿನ ತಂಗಿದ್ದ ಡಾ.ಬುಕಾನನ್ ಚಳ್ಳಕೆರೆಯ ನನ್ನಿವಾಳದ ಗುಡ್ಡದ ಬಗ್ಗೆಯೂ ಮಾಹಿತಿ ಕಲೆ ಹಾಕುತ್ತಾರೆ. ಐಮಂಗಲಕ್ಕೆ ಹೋಗಿ ಅಲ್ಲಿನ ಕೋಟೆಯ ಬಗ್ಗೆಯೂ ಬರೆಯುತ್ತಾರೆ. ಬೆನ್ನಿಗೆ ಕೊಕ್ಕೆ ಹಾಕಿ ಸಿಡಿ ಆಡಿಸುವ ಕ್ರೂರ ಪದ್ದತಿಯನ್ನು ತಮ್ಮ ಬರವಣಿಗೆಯಲ್ಲಿ ಖಂಡಿಸಿದ್ದಾರೆ. ಹಿರಿಯೂರಿನ ತಾಲ್ಲೂಕಿನಲ್ಲಿ ವರ್ಷವಿಡಿ ಹರಿಯುವ ವೇದಾವತಿ ನದಿಯ ಬಗ್ಗೆಯೂ ಉಲ್ಲೇಖಿಸಿ ಮೂರು ಬಗೆಯ ಮೀನುಗಳನ್ನು ಕಂಡಿದ್ದೇನೆಂದು ಬರೆಯುತ್ತಾರೆಂದು ಚಿತ್ರದುರ್ಗ ಜಿಲ್ಲೆ ಡಾ.ಬುಕಾನನ್ ಮತ್ತು ಡಾಬ್ಸ್ ಕಂಡಂತೆ ಕೂಲಂಕುಷವಾಗಿ ಮಾಹಿತಿಯನ್ನು ಉಪನ್ಯಾಸದಲ್ಲಿ ಹಂಚಿಕೊಂಡರು.

ಚಿತ್ರದುರ್ಗ ಇತಿಹಾಸ ಕೂಟದ ಸಂಚಾಲಕ ಡಾ.ಎನ್.ಎಸ್.ಮಹಂತೇಶ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಚಿತ್ರದುರ್ಗ ಇತಿಹಾಸ ಕೂಟದ ನಿರ್ದೇಶಕ ಡಾ.ಲಕ್ಷ್ಮಣತೆಲಗಾವಿ, ಪ್ರೊ.ಹೆಚ್.ಲಿಂಗಪ್ಪ, ಮದಕರಿನಾಯಕ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷ ಡಿ.ಗೋಪಾಲಸ್ವಾಮಿ ನಾಯಕ

ಮೃತ್ಯುಂಜಯಪ್ಪ, ಹಿರಿಯ ಪತ್ರಕರ್ತ ಜಿ.ಎಸ್. ಉಜ್ಜಿನಪ್ಪ, ಪ್ರೊ.ವೀರಣ್ಣ, ಪ್ರೊ.ವೀರನಾಯಕ, ಡಾ.ತಿಪ್ಪೇಸ್ವಾಮಿ, ರೇಣುಕಾ ಪ್ರಕಾಶನದ ಗೌರವಾಧ್ಯಕ್ಷೆ ವೈ.ಗುಣವತಿ ಮಹಂತೇಶ, ಸ್ನಾತಕೋತ್ತರ ವಿದ್ಯಾರ್ಥಿಗಳು ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಮಹಿಳೆ ಸ್ವಾವಲಂಬಿ ಬದುಕಿಗೆ ಟೈಲರಿಂಗ್ ಉದ್ಯೋಗ ಉಪಯುಕ್ತ



» **ಚಳ್ಳಕೆರೆ**

ಇತ್ತೀಚಿನ ವರ್ಷಗಳಲ್ಲಿ ಮಹಿಳೆಯರು ತಮ್ಮ ಮನೆಯಲ್ಲೇ ಆರ್ಥಿಕವಾಗಿ ಸಭಲರಾಗಲು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯೋಜನೆ ಮಹಿಳೆಯರಿಗೆ ಹೊಲಿಗೆ ತರಬೇತಿ ನೀಡಿ, ಹೊಲಿಗೆ ಯಂತ್ರಗಳನ್ನು ನೀಡುವ ಮೂಲಕ ಅವರ ಸ್ವಾವಲಂಭಿ ಬದುಕಿಗೆ ಸಹಕಾರಿಯಾಗಿದೆ ಎಂದು ನಾಯಕನಹಟ್ಟಿ ವಲಯಯೋಜನಾಧಿಕಾರಿ ಅಣ್ಣಪ್ಪ ತಿಳಿಸಿದರು. ಅವರು, ಭಾನುವಾರ ನಾಯಕನಹಟ್ಟಿ ವಲಯದ ಗೌಡಗೆರೆ ಗ್ರಾಮದಲ್ಲಿ ಟೈಲರಿಂಗ್ ತರಬೇತಿ ಪಡೆದ ಮಹಿಳೆಯರಿಗೆ ತರಬೇತಿ ಪ್ರಮಾಣಪತ್ರಗಳನ್ನು ನೀಡಿ ಮಾತನಾಡಿದರು. ರುಟ್‌ಸೆಟ್‌ಸಂಸ್ಥೆ ತರಬೇತಿ ವ್ಯವಸ್ಥೆಯನ್ನು ಮಾಡಿತ್ತು, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗೌಡಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಾಂತಮ್ಮ, ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳೆಯರಿಗೆ ಉತ್ತಮ ತರಬೇತಿ ನೀಡಿ ಅವರಿಗೆ ಪ್ರಮಾಣಪತ್ರವನ್ನು ನೀಡಿದೆ. ಟೈಲರಿಂಗ್ ಸಹ ಇಂದು ಗ್ರಾಮೀಣ ಭಾಗಗಳಲ್ಲಿ ಹೆಚ್ಚು ಪ್ರಾಧಾನ್ಯತೆಯನ್ನು ಪಡೆಯುತ್ತಿದೆ. ಮಹಿಳೆಯರು ತಮ್ಮ ಗ್ರಾಮದ ತಮ್ಮ ಮನೆಯಲ್ಲೇ ಉದ್ಯೋಗಸ್ಥಳಾಗಿ ಕಾರ್ಯನಿರ್ವಹಿಸುವ ವ್ಯವಸ್ಥೆ ಮಾಡಿರುವುದು ಸಂತಸದ ವಿಷಯವೆಂದರು. ಕಾರ್ಯಕ್ರಮದಲ್ಲಿ ಸಮನ್ವಯಾಧಿಕಾರಿ ಯಶೋಧ, ಮೇಲ್ವಿಚಾರಕಿ ಶಶಿಕಲಾ, ಹೊಲಿಗೆ ಶಿಕ್ಷಕಿ ಟಿ.ಲಕ್ಷ್ಮಿ, ಸೇವಾಪ್ರತಿನಿಧಿ ಲಕ್ಷ್ಮಿ ಮುಂತಾದವರು ಉಪಸ್ಥಿತರಿದ್ದರು.

### ರಂಗ ತರಬೇತಿ ಶಿಬಿರ

**ತುಮಕೂರು:** ಗುಬ್ಬಿ ಪಟ್ಟಣದ ಡಾ: ಗುಬ್ಬಿ ವೀರಣ್ಣ ಟ್ರಸ್ಟ್ ವತಿಯಿಂದ ಗುಬ್ಬಿ ಪಟ್ಟಣದ ಡಾ: ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಮಕ್ಕಳಿಗಾಗಿ ಏಪ್ರಿಲ್ 4 ರಿಂದ ಮೇ 10ರವರೆಗೆ ಬೇಸಿಗೆ ರಂಗ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ಶಿಬಿರದಲ್ಲಿ 8 ರಿಂದ 14 ವರ್ಷ ವಯೋಮಾನದ ಮಕ್ಕಳು ಭಾಗವಹಿಸಬಹುದಾಗಿದೆ.

## ಪ್ರಮುಖ ಸುದ್ದಿ

# ಅಂಚೆ ನೌಕರರ ಸಂಘದ 42ನೇ ಜಂಟಿ ದ್ವೈವಾರ್ಷಿಕ ಸಮ್ಮೇಳನ

» **ಚಿತ್ರದುರ್ಗ**

ನಿಮ್ಮ ಎಲ್ಲಾ ರೀತಿಯಾದ ಸಮಸ್ಯೆಗಳಿಗೆ ನನ್ನ ಕೈಲಾದ ಪರಿಹಾರವನ್ನು ನೀಡುತ್ತೇನೆ, ಸಂಘಟನೆಯನ್ನು ಬಲಪಡಿಸಿಕೊಳ್ಳಿ ಎಂದು ಚಿತ್ರದುರ್ಗ ವಿಭಾಗದ ಅಂಚೆ ಅಧೀಕ್ಷಕರಾದ ಕೆ. ಆರ್. ಉಷಾ ಕರೆ ನೀಡಿದರು.

ನಗರದ ಕೋಟೆ ಮುಂಭಾಗದ ಮಹಾರಾಣಿ ಕಾಲೇಜಿನ ಶ್ರೀ ಗುರು ವಾಲ್ಮೀಕಿ ಆಡಿಟೋರಿಯಂನಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ, ಅಖಿಲ ಭಾರತ ಅಂಚೆ ನೌಕರರ ಸಂಘಗಳು ಮೂರನೇ ವರ್ಗ, ನಾಲ್ಕನೇ ವರ್ಗ ಮತ್ತು ಗ್ರಾಮೀಣ ಅಂಚೆ ನೌಕರರ ಸಂಘಗಳ ಚಿತ್ರದುರ್ಗ ವಿಭಾಗದ 42 ನೇ ಜಂಟಿ ದ್ವೈವಾರ್ಷಿಕ ಸಮ್ಮೇಳನವನ್ನು ಉದ್ಘಾಟಿಸಲಿ ಮಾತನಾಡಿದ ಅವರು, ಚಿತ್ರದುರ್ಗದ ಎರಡು ಸಂಘಗಳಲ್ಲಿಯೂ ಒಗ್ಗಟು ಇದೆ. ಬೇರೆ ಕಡೆಗಳಲ್ಲಿ ಈ ರೀತಿಯಾದ ಒಗ್ಗಟು ಇಲ್ಲ, ಇಲ್ಲಿ ನಿಮ್ಮ ಒಗ್ಗಟ್ಟನ್ನು ನೋಡಿ ಸಂತೋಷವಾಗುತ್ತದೆ. ಇದೇ ಒಗ್ಗಟ್ಟನ್ನು ಕಾಪಾಡಿಕೊಳ್ಳಿ ಎರಡು ಯೂನಿಯನ್‌ಗಳು ಜಂಟಿಯಾಗಿ ಸಮ್ಮೇಳವನ್ನು ಮುಂದಿನ ದಿನದಲ್ಲಿ ಮಾಡಿ, ನಿಮ್ಮ ಒಗ್ಗಟ್ಟಿಗೆ ಮುಂದಿನ ದಿನದಲ್ಲಿ ಬಲ ಸಿಗಲಿದೆ. ನಿಮ್ಮ ಎಲ್ಲಾ ರೀತಿಯ ಸಮಸ್ಯೆಗಳಿಗೆ



ನಾನು ನನ್ನ ಕೈಲಾದಷ್ಟು ಪರಿಹಾರವನ್ನು ನೀಡಲಾಗುವುದು ಎಂದರು.

ಗ್ರೂಪ್.ಸಿ.ನ ರಾಷ್ಟ್ರೀಯ ಕಾರ್ಯಾಧ್ಯಕ್ಷರು, ನವದೆಹಲಿ, ಮತ್ತು ಕರ್ನಾಟಕ ಸರ್ಕಲ್‌ನ ವಲಯ ಕಾರ್ಯದರ್ಶಿಗಳಾದ ಕಾಂ, ಜಿ. ಜಾನಕಿರಾಮ್ ಮಾತನಾಡಿ, ಕೇಂದ್ರ ಸರ್ಕಾರ ನಮ್ಮ ಅಂಚೆ ಇಲಾಖೆಯಲ್ಲಿ ಇದುವರೆವಿಗೂ ಸೇವಾ ಮಮೋಭಾವ ಇತ್ತು ಅದರೆ ಇತ್ತೀಚಿನ ದಿನಮಾನದಲ್ಲಿ ಇಲಾಖೆಯನ್ನು ಲಾಭದಾಯಕ ಇಲಾಖೆಯನ್ನಾಗಿ ಮಾಡಲು ಹೊರಟಿದೆ, ಜನತೆಗೆ ಪತ್ರವನ್ನು ಮಾತ್ರ ತಲುಪಿಸುತ್ತಿದ್ದ ಇಲಾಖೆಇದುವಿವಿಧರೀತಿಯಸೇವೆಯನ್ನು ಮಾಡುತ್ತಿದೆ. ನಮ್ಮ ಇಲಾಖೆಯಲ್ಲಿ ಈಗ ನೇಮಕಾತಿ ಆಗುತ್ತಿರುವವವರು ಉನ್ನತ ವಿದ್ಯೆಯನ್ನು ಪಡೆಸದವರಾಗಿದ್ದಾರೆ ಇವರು ಮುಂದೆ ಬಡ್ತಿಯನ್ನು ಪಡೆದು ಉತ್ತನ ಹುದ್ದೆಗೆ ಹೋದಾಗ ಅಲ್ಲಿ ಉತ್ತಮ ರೀತಿಯ ಮಾರ್ಪಾಡುಗಳು ಆಗುತ್ತವೆ ಎಂಬ ನಂಬಿಕೆ ಇದೆ ಎಂದರು.

ನಮ್ಮ ಇಲಾಖೆ ಈಗ ನಷ್ಟದಲ್ಲಿ ನಡೆಯುತ್ತಿದೆ ಈ ನಷ್ಟದಿಂದ ಹೊರಗೆ ಬರುವ ಸಲುವಾಗಿ ಇಲಾಖೆಯನ್ನು ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ನಡೆಯುತಿದೆ ಇವರಿಗೆ ಸರ್ಕಾರದ ಯಾವುದೇ ಸೌಲಭ್ಯವನ್ನು ನೀಡದೆ ವೇತನವನ್ನು ಮಾತ್ರ ನೀಡುವುದರ ಮೂಲಕ ಇಲಾಖೆಯನ್ನು ಲಾಘದತ್ತ ಕೊಂಡ್ಯೂಯುವ ಕಾರ್ಯವನ್ನು ಮಾಡಲಾಗುತ್ತಿದೆ. ನಮ್ಮ ಸಂಘಟನೆಯಿಂದ ಸಿಬ್ಬಂದಿಗಳಿಗೆ ಅನ್ಯಾಯವಾಗಲು ಬಿಡುವುದಿಲ್ಲ ಸಿಬ್ಬಂದಿಗಳಿಗೆ ಆರೋಗ್ಯಕರವಾದ ಅದೇಶಗಳನ್ನು ಜಾರಿ ಮಾಡಲು ನಮ್ಮ ಸಂಘಟನೆ ಹೋರಾಟವನ್ನು ಮಾಡುತ್ತದೆ. ನಮ್ಮ ಮೇಲಿನ ಅಧಿಕಾರಿಗಳು ನಮಗೆ ಗುರಿಯನ್ನು ನೀಡಿದಾಗ ನಾವುಗಳು ಉತ್ತಮವಾಗಿ ಕೆಲಸವನ್ನು ಮಾಡುತ್ತೇವೆ ಅವರೇ ಗುರಿಯನ್ನು ನೀಡದಿದ್ಧಾಗ ಕೆಲಸದಲ್ಲಿ ಅಸಡ್ಡೆಯನ್ನು ತೋರಿಸಲಾಗುತ್ತದೆ ಈ ರೀತಿ ಆಗದಂತೆ ಎಚ್ಚರವನ್ನು ವಹಿಸಬೇಕಿದೆ ಎಂದು ಕರೆ ನೀಡಿದರು. ಪ್ರಸ್ತಾವಿಕವಾಗಿ ಮಾತನಾಡಿದ ಅಖಿಲ ಭಾರತ ಅಂಚೆ ನೌಕರರ ಸಂಘಗಳು ವಿಭಾಗೀಯ ಕಾರ್ಯದರ್ಶಿ ಆರ್.ಕರಿಸಿದ್ದಪ್ಪ ಈ ಸಂಘ 1907ರಲ್ಲಿ ಪ್ರಾರಂಭವಾಯಿತು ಇದುವರೆವಿಗೂ ಹಲವಾರು ರೀತಿಯ ಏಳು ಬೀಳುಗಳನ್ನು ಕಂಡಿದೆ. ನಮ್ಮ ಹಿರಿಯರು ಮಾಡಿದ ಸಂಘಟನೆಯ ಫಲವನ್ನು ನಾವು ಈಗ ಪಡೆಯುತ್ತಿದ್ದೇವೆ ಈಗ ನಾವು ಮಾಡಿದ ಸಂಘಟನೆಯನ್ನು ನಮ್ಮ ಮುಂದಿನ ಪೀಳೀಗೆಯವರು ಪಡೆಯುತ್ತಾರೆ. ಇದಕ್ಕಾಗಿ ಹೋರಾಟ ಅನಿವಾರ್ಯವಾಗಿದೆ. ನಮ್ಮ ಹೋರಾಟ ಯಾವುದೇ ಸರ್ಕಾರವಾಗಲಿ ಆಡಳಿತ ಶಾಹಿಯ ವಿರುದ್ದವಾಗಿ ಅಲ್ಲ ನಮ್ಮ ಬೇಡಿಕೆಗಳ ಈಡೇರಿಕೆಗಾಗಿ ಮಾತ್ರ ಎಂದರು.

ಕಾರ್ಯಕ್ರಮದಲ್ಲಿ ಅಖಿಲ ಭಾರತ ಅಂಚೆ ನೌಕರರ ಸಂಘದ ಮೂರನೇ ವರ್ಗದ ಅಧ್ಯಕ್ಷರಾದ ಕಾಂ.ಕೆ. ಚಿದಾನಂದ ಸಮ್ಮೇಳನದ ಅಧ್ಯಕ್ಷತೆಯನ್ನು ವಹಿಸಿದ್ದರು. ಅಖಿಲ ಭಾರತ ಅಂಚೆ ನೌಕರರ ಸಂಘ, ಕರ್ನಾಟಕ ವಲಯದ ಅಧ್ಯಕ್ಷರಾದ ಕಾಂ. ಚಂದ್ರಸ್ವಾಮಿ ವಲಯ ಸಹಕಾರ್ಯದರ್ಶಿ ಕಾಂ. ಕೆ.ಎಸ್. ರುದ್ರೇಶ್, ಚಿತ್ರದುರ್ಗ ಉಪ ವಿಭಾಗದ ಸಹಾಯಕ ಅಂಚೆ ಅಧೀಕ್ಷಕರಾದ ಎನ್. ಅನಿಲ್ ಕುಮಾರ್, ಅಖಿಲ ಭಾರತ ಅಂಚೆ ನೌಕರರ ಸಂಘ, ಮೂರನೇ ವರ್ಗದ ಮಾಜಿ ವಿಭಾಗೀಯ ಕಾರ್ಯದರ್ಶಿ ಹೆಚ್. ಚೌಡಪ್ಪ, ಅಖಿಲ ಭಾರತ ಅಂಚೆ ನೌಕರರ ಸಂಘ, ಮೂರನೇ ವರ್ಗದ ಮಾಜಿ ಗೌರವಾಧ್ಯಕ್ಷರಾದ ಕಾಂ, ಜಿ.ಟಿ. ಮಠಪತಿ ವಿಭಾಗೀಯ ಮಾಜಿ ಕಾರ್ಯದರ್ಶಿ ಕಾಂ.ಕೆ. ರಂಗಸ್ವಾಮಿ, ಶಿವಾನಂದ, ಮಂಜುನಾಥ್, ಲಕ್ಷ್ಮಣ್, ಶಶಿಕುಮಾರ್, ತಿಮ್ಮರಾಯಪ್ಪ, ಲೋಕೇಶಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T